

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 241 | ₹ ಬೆಲೆ: 4 | Friday, 17, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## 'ಮೈತ್ರಿ ಸರ್ಕಾರ 'ಪತನದ ರಹಸ್ಯ ಬಿಚ್ಚಿಟ್ಟ ಡಿಸಿಎಂ ಡಿ.ಕೆ ಶಿವಕುಮಾರ್



ಬೆಂಗಳೂರು : ಅಂದು ಮೈತ್ರಿ ಶಾಸಕರು ನನ್ನನ್ನು ಸಿಎಂ ಮಾಡಿ ಅಂದಾಗ ಹೆಚ್ ಡಿ ಕುಮಾರಸ್ವಾಮಿ ಒಪ್ಪಿರಲಿಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.

ಭಾರತ್ ಜೋಡೋ ಸಭಾಂಗಣದಲ್ಲಿ ನಡೆದ ಜೆಡಿಎಸ್ ಪಕ್ಷದ ಮಾಜಿ ಶಾಸಕರಾದ ಗೌರಿಶಂಕರ್ ಮತ್ತು ಮಂಜುನಾಥ್ ಅವರ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿಕೆಶಿ ಮಾತನಾಡಿದರು.

ಕುಮಾರಸ್ವಾಮಿ ಕರ್ನಾಟಕದಲ್ಲಿ ಬಿಜೆಪಿ ಜೊತೆ ಸೇರಿದ್ದಾರೆ. 30 ಸ್ಥಾನ ಗೆದ್ದಂತಹ ಅವರ ಪಕ್ಷಕ್ಕೆ ಬೆಂಬಲ ನೀಡಿ ಕುಮಾರಸ್ವಾಮಿ ಅವರನ್ನು ಮುಖ್ಯಮಂತ್ರಿ ಮಾಡಿದ್ದೆವು. ಈಗ ಸರ್ಕಾರ ಬೀಳಿಸಿದವರ ಜೊತೆಗೆ ಅವರು ನೆಂಟಸ್ಥನ ಮಾಡಿದ್ದಾರೆ ಎಂದು ಡಿಸಿಎಂ ಡಿಕೆಶಿ ಹೇಳಿದರು.

ಕಾಂಗ್ರೆಸ್ ಪಕ್ಷದ 40 ಜನ ಬಿಜೆಪಿ ಸಂಪರ್ಕದಲ್ಲಿ ಇದ್ದಾರೆ ಎನ್ನುವ ಹೆಚ್ಡಿಕೆ ಇನ್ನೊಂದೆಡೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗುವುದಾದರೆ ಜೆಡಿಎಸ್ ಪಕ್ಷದ 19 ಶಾಸಕರ ಬೆಂಬಲ ನೀಡುತ್ತೇವೆ ಎನ್ನುತ್ತಾರೆ, ಅವರ ಮಾತು ಕೇಳಲು ನಾವೇನು ದಡ್ಡರೇ? ಎಂದು ಎಂದು ಡಿಸಿಎಂ ಡಿಕೆಶಿ ಹೇಳಿದರು.

## ನಿಜ್ಜರ್ ಹತ್ಯೆ: ತನಿಖೆಗೆ ನಿರಾಕರಿಸುತ್ತಿಲ್ಲ, ಕೆನಡಾ ಮೊದಲು ಸಾಕ್ಷ್ಯ ಕೊಡಲಿ; ಭಾರತ ತಿರುಗೇಟು


ನವದೆಹಲಿ: ಖಲಿಸ್ತಾನಿ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯ ನಂತರ ಭಾರತ ಮತ್ತು ಕೆನಡಾ ನಡುವಿನ ಸಂಬಂಧ ಹಳಸಿದ್ದು, ಕೆನಡಾ ಆರೋಪ ಸಂಬಂಧ ಭಾರತ ಮತ್ತೊಮ್ಮೆ ಸ್ಪಷ್ಟನೆ ನೀಡಿದೆ.

ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಹಿರಿಯ ಪತ್ರಕರ್ತ ಲಿಯೋನೆಲ್ ಬಾರ್ಬರ್ ಅವರೊಂದಿಗೆ 'ಒಂದು ಬಿಲಿಯನ್ ಜನರು ಜಗತ್ತನ್ನು ಹೇಗೆ ನೋಡುತ್ತಾರೆ' ಎಂಬ ಶೀರ್ಷಿಕೆಯ ಕಾರ್ಯಕ್ರಮದಲ್ಲಿ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಐದು ದಿನಗಳ ಅಧಿಕೃತ ಭೇಟಿಗಾಗಿ ಬ್ರಿಟನ್'ಗೆ ಜೈಶಂಕರ್ ಅವರು ತೆರಳಿದ್ದು, ಈ ವೇಳೆ ಪ್ರಶ್ನೆಯೊಂದಕ್ಕೆ ಉತ್ತರಿಸಿ, ಕೆನಡಾ ಆರೋಪ ಕುರಿತು ಸ್ಪಷ್ಟನೆ ನೀಡಿದ್ದಾರೆ.

'ನೀವು ಅಂತಹ ಆರೋಪ ಮಾಡಲು ನಿಖರ ಕಾರಣವಿದ್ದರೆ ದಯವಿಟ್ಟು ಸಾಕ್ಷ್ಯವನ್ನು ಹಂಚಿಕೊಳ್ಳಿ ಏಕೆಂದರೆ ನಾವು ತನಿಖೆಯನ್ನು ನಿರಾಕರಿಸುತ್ತಿಲ್ಲ' ಆದರೆ ಕೆನಡಾ ತನ್ನ ಆರೋಪವನ್ನು ಬೆಂಬಲಿಸಲು ಭಾರತದೊಂದಿಗೆ ಯಾವುದೇ ಪುರಾವೆಗಳನ್ನು ಹಂಚಿಕೊಂಡಿಲ್ಲ ಎಂದು ಹೇಳಿದರು.

ಇದೇ ವೇಳೆ ಕೆನಡಾದಲ್ಲಿನ ಖಲಿಸ್ತಾನ್ ಪರ ಚಟುವಟಿಕೆಗಳನ್ನು ಉಲ್ಲೇಖಿಸಿದ ಜೈಶಂಕರ್ ಅವರು,, ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವು ಒಂದು ನಿರ್ದಿಷ್ಟ ಜವಾಬ್ದಾರಿಯೊಂದಿಗೆ ಬರುತ್ತದೆ ಮತ್ತು ಆ ಸ್ವಾತಂತ್ರ್ಯಗಳನ್ನು ದುರುಪಯೋಗ ಪಡಿಸಿಕೊಳ್ಳುವುದು ಮತ್ತು ರಾಜಕೀಯ ಉದ್ದೇಶಗಳಿಗಾಗಿ



ದುರುಪಯೋಗವನ್ನು ಸಹಿಸಿಕೊಳ್ಳುವುದು ತುಂಬಾ ತಪ್ಪು ಎಂದು ಹೇಳಿದರು.

ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆ ಕುರಿತ ತನಿಖೆಗೆ ಭಾರತ ಸಹಕರಿಸುತ್ತದೆ. ಆದರೆ, ಭಾರತದ ವಿರುದ್ಧ ಕೆನಡಾ ಮಾಡಿದ ಆರೋಪಗಳಿಗೆ ಮೊದಲು ಸಾಕ್ಷ್ಯ ಕೊಡಲಿ" ಎಂದು ಆಗ್ರಹಿಸಿದರು.

"ಭಾರತದ ವಿರುದ್ಧ ಕೆನಡಾ ಗಂಭೀರ ಆರೋಪಗಳನ್ನು ಮಾಡಿದೆ. ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆ ಹಿಂದೆ ಭಾರತದ ಕೈವಾಡವಿದೆ ಎಂದು ಆರೋಪಿಸಿದೆ. ಕೆನಡಾ ಆರೋಪಗಳ ಕುರಿತ ತನಿಖೆಗೆ ಭಾರತ ಸಿದ್ಧವಾಗಿದೆ. ನಾವು ತನಿಖೆಯಿಂದ ದೂರ ಸರಿಯುವ, ಸಹಕರಿಸದಿರುವ ಮಾತೇ ಇಲ್ಲ. ಆದರೆ, ನಾವು ಕೆನಡಾ ಸರ್ಕಾರಕ್ಕೆ ಸಾಕ್ಷ್ಯ ಕೊಡಿ ಎಂದು ಮಾತ್ರ ಕೇಳಿದ್ದೇವೆ. ಸಾಕ್ಷ್ಯವಿಲ್ಲದೆ ತನಿಖೆ ನಡೆಯುವುದು ಹೇಗೆ ಸಾಧ್ಯ" ಎಂದು ಪ್ರಶ್ನಿಸಿದರು.

"ಕೆನಡಾದಲ್ಲಿ ಭಾರತ ವಿರೋಧಿ ಚಟುವಟಿಕೆಗಳು ನಡೆಯುತ್ತಿವೆ. ಭಾರತದ ಹೈಕಮಿಷನ್ ಮೇಲೆ ದಾಳಿ ನಡೆಸಲಾಗುತ್ತಿದೆ. ಹೀಗಿರುವಾಗ ಸಹಜವಾಗಿಯೇ ಭಾರತವು ಕ್ರಮಕ್ಕೆ ಆಗ್ರಹಿಸುತ್ತದೆ. ಆದರೆ, ಕೆನಡಾ ರಾಜಕೀಯದಲ್ಲಿ ಹಿಂಸಾತ್ಮಕ ಮನೋಭಾವದ ವ್ಯಕ್ತಿಗಳು ಬಂದು ಸೇರಿದ್ದಾರೆ. ಇದರಿಂದಾಗಿ ಪರಿಸ್ಥಿತಿ ಹದಗೆಟ್ಟಿದೆ ಎಂದರು.

ಬಳಿಕ ಅಭಿವ್ಯಕ್ತಿ ಸ್ವಾತಂತ್ರ್ಯದ ಕುರಿತು ಮಾತನಾಡಿದ ಜೈಶಂಕರ್, "ಅಭಿವ್ಯಕ್ತಿ ಸ್ವಾತಂತ್ರ್ಯವು ಜವಾಬ್ದಾರಿಯುತವಾಗಿ ಇರಬೇಕೇ ಹೊರತು, ಹುರುಳಿಲ್ಲದ ಆರೋಪಗಳು ಆಗಬಾರದು" ಎಂದು ತಿರುಗೇಟು ನೀಡಿದರು.

ಜೂನ್ 18ರಂದು ನಡೆದ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯಲ್ಲಿ ಭಾರತೀಯ ಏಜೆನ್ಸಿಗಳ ಕೈವಾಡ ಇರುವ ಸಾಧ್ಯತೆ ಇದೆ ಎಂದು ಕೆನಡಾ ಪ್ರಧಾನಿ ಜಸ್ಟಿನ್ ಟ್ರೂಡೋ ಅವರು ಹೇಳಿಕೆ ನೀಡಿದ್ದರು. ಇದಾದ ಬೆನ್ನಲ್ಲೇ ಭಾರತ ಮತ್ತು ಕೆನಡಾ ಮಧ್ಯೆ ರಾಜತಾಂತ್ರಿಕ ಸಂಘರ್ಷ ಏರ್ಪಟ್ಟಿತ್ತು. ಕೆನಡಾ ಆರೋಪಕ್ಕೆ ಪ್ರತಿಕ್ರಿಯಿಸಿದ್ದ ಭಾರತ, ಇದೊಂದು ಆಧಾರ ರಹಿತ ಆರೋಪ ಎಂದು ಹೇಳಿತ್ತು. ಅಲ್ಲದೇ ಉಭಯ ರಾಷ್ಟ್ರಗಳು ರಾಜತಾಂತ್ರಿಕ ಅಧಿಕಾರಿಗಳನ್ನು ವಜಾ ಮಾಡುವ ಮೂಲಕ ಸ್ಪರ್ಧೆಗೆ ಇಳಿದಿದ್ದವು. ಆದಾಗ್ಯೂ, ಭಾರತವು ಕೆನಡಾ ರಾಜತಾಂತ್ರಿಕರನ್ನು ದೇಶದಿಂದ ವಾಪಸ್ ಕಳುಹಿಸಿದೆ.

## ಅಕ್ರಮ ವಿದ್ಯುತ್ ಪ್ರಕರಣ ಹೆಚ್‌ಡಿಕೆ ಗೆ 68 ಸಾವಿರ ದಂಡ



ಬೆಂಗಳೂರು: ಬೆಂಗಳೂರಿನ ಜೆಪಿ ನಗರದಲ್ಲಿರುವ ಮಾಜಿ ಸಿಎಂ ಹೆಚ್ಡಿ ಕುಮಾರಸ್ವಾಮಿ ಅವರ ನಿವಾಸಕ್ಕೆ ದೀಪಾವಳಿ ದೀಪಾಲಂಕಾರ'ಕ್ಕಾಗಿ ಅನಧಿಕೃತವಾಗಿ ಬೀದಿ ದೀಪದ ಕಂಬದಿಂದ ನೇರವಾಗಿ ವಿದ್ಯುತ್ ಪಡೆದಿರುವ ಆರೋಪವನ್ನು ಕಾಂಗ್ರೆಸ್ ಮಾಡಿತ್ತು. ಇದಾದ ಬಳಿಕ ಜಯನಗರದ ಬೆಸ್ಕಾಂ ಜಾಗೃತ ದಳದ ಅಧಿಕಾರಿಗಳು ಮಾಜಿ ಮುಖ್ಯಮಂತ್ರಿ ಹೆಚ್ಡಿ ಕುಮಾರಸ್ವಾಮಿ ಅವರ ಮನೆಗೆ ತೆರಳಿ ಪರಿಶೀಲನೆ ಮಾಡಿ, ಬಳಿಕ ಅವರ ವಿರುದ್ಧ ಎಫ್‌ಐಆರ್ ಕೂಡ ದಾಖಲಿಸಿದ್ದರು. ಇದೀಗ ಅಕ್ರಮ ವಿದ್ಯುತ್ ಬಳಕೆಯ ದಂಡವನ್ನು ಬೆಸ್ಕಾಂ ಇಲಾಖೆ ವಿಧಿಸಿದೆ.

ಮಾಜಿ ಸಿಎಂ ಎಚ್ಡಿಕೆಗೆ ಬಿತ್ತು ದಂಡ: ಇನ್ನು ಈ ಕುರಿತು ಬೆಸ್ಕಾಂ ಬೆಸ್ಕಾಂ ಜಾಗೃತಾ ದಳದ ಡಿವೈಎಸ್ಪಿ ಅನುಷ ನೇತೃತ್ವದಲ್ಲಿ ವಿದ್ಯುತ್ ಬಳಕೆ ಕೌಂಟಿಂಗ್ ಮಾಡಿ, 10 ನಿಮಿಷಕ್ಕೆ ಎಷ್ಟು ವಿದ್ಯುತ್ ಬಳಕೆ ಆಗುತ್ತದೆ ಎನ್ನುವುದನ್ನು ಲೆಕ್ಕ ಮಾಡಿದ್ದರು. ಇದರಿಂದ ಎರಡು ದಿನ ಎಷ್ಟು ಬಳಕೆ ಆಗಿದೆ ಎಂಬುದರ ಲೆಕ್ಕ ತೆಗೆದು, ನ.14 ರಂದು ಅಧಿಕಾರಿಗಳು ರಿಪೋರ್ಟ್ ನೀಡಿದ್ದರು. ಇದೀಗ ಬೆಸ್ಕಾಂ ಇಲಾಖೆ ಬರೋಬ್ಬರಿ 68 ಸಾವಿರ ದಂಡವನ್ನು ವಿಧಿಸಿದ್ದು, ಅದನ್ನು ಏಳು ದಿನಗಳೊಳಗಾಗಿ ಕಟ್ಟುವಂತೆ ಸೂಚಿಸಿದೆ.

## ಕೋಲಾರ: 50 ಸಾವಿರ ರೂ ಮೌಲ್ಯದ ಗಾಂಜಾ ವಶ, ಮೂವರ ಬಂಧನ



ಕೋಲಾರ: ಕೋಲಾರದಲ್ಲಿ ಮಹತ್ವದ ಕಾರ್ಯಾಚರಣೆ ನಡೆಸಿರುವ ಪೊಲೀಸರು ಪೌಲ್ಟ್ರಿ ಫಾರಂ ಆವರಣದಲ್ಲಿ ಗಾಂಜಾ ಗಿಡಗಳನ್ನು ಬೆಳೆದಿದ್ದ ಒರಿಸ್ಸಾ ಮೂಲದ ಮೂವರು ಕಾರ್ಮಿಕರನ್ನು ಬಂಧಿಸಿದ್ದು, ಸುಮಾರು 50 ಸಾವಿರ ರೂ ಮೌಲ್ಯದ ಗಾಂಜಾ ಗಿಡವನ್ನು ವಶಕ್ಕೆ ಪಡೆದಿದ್ದಾರೆ.

ಗಾಂಜಾ ಮತ್ತು ಡ್ರಗ್ಸ್ ಮುಕ್ತ ಜಿಲ್ಲೆಯಾಗಿಸಲು ಮಾಡಲು ಪಣತೊಟ್ಟಿರುವ ಸಿಇಎನ್ ಪೊಲೀಸರು ಪೌಲ್ಟ್ರಿ ಫಾರಂ ಆವರಣದಲ್ಲಿ ಗಾಂಜಾ ಗಿಡಗಳನ್ನು ಬೆಳೆದಿದ್ದ ಒರಿಸ್ಸಾ ಮೂಲದ ಮೂವರು ಕಾರ್ಮಿಕರನ್ನು ಬಂಧಿಸಿದ್ದಾರೆ. ಮುಳಬಾಗಿಲು ತಾಲೂಕಿನ ಗಡ್ಡಂ ಚಿನ್ನೇಪಲ್ಲಿ ಗ್ರಾಮದ ಸಮೀಪ ಬಾಲಾಜಿ ಎಂಬುವರಿಗೆ ಸೇರಿದ ಜಮೀನನಲ್ಲಿರುವ ಸುಗುಣ ಪೌಲ್ಟ್ರಿ ಫಾರಂನ ಆವರಣದಲ್ಲಿ 50 ಸಾವಿರ ಬೆಲೆಬಾಳುವ ಗಾಂಜಾ ಗಿಡಗಳು ಪತ್ತೆ ಮಾಡಿದ್ದಾರೆ.

ಎಸ್ಪಿ ನಾರಾಯಣ್ ಮಾರ್ಗದರ್ಶನದಲ್ಲಿ ಸಿಇಎನ್ ಪೊಲೀಸ್ ಇನ್‌ಪೆಕ್ಟರ್ ಜಗದೀಶ್ ನೇತೃತ್ವದಲ್ಲಿ ದಾಳಿ ನಡೆಸಿರುವ ಪೊಲೀಸರು ಗಾಂಜಾ ಪೆಡ್ಲರ್‌ಗಳ ಬೆನ್ನತಿ ನೆರೆ ರಾಜ್ಯಕ್ಕೆ ತೆರಳಿದ ಕೋಲಾರದ ಸಿಇಎನ್ ಪೊಲೀಸರು ಗಾಂಜಾ ಬೆಳೆದ ಒರಿಸ್ಸ ಮೂಲದ ಮೂವರ ಬಂಧನ ನಂತರ ಪ್ರಕರಣ ಜಾಡು ಹಿಡಿಯಲು ಒರಿಸ್ಸಾ ಹಾಗೂ ಆಂಧ್ರದ ವಿಶಾಖಪಟ್ಟಣಂ ಸೇರಿದಂತೆ ಹಲವು ಕಡೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದರು. ಮುಳಬಾಗಿಲು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.


## ಸಿಎಂ ಸಿದ್ದರಾಮಯ್ಯ ವಿರುದ್ಧ ಹೇಳಿಕೆ: ಚಕ್ರವರ್ತಿ ಸೂಲಿಬೆಲೆ ವಿರುದ್ಧದ ಎಫ್‌ಐಆರ್‌ಗೆ ಕರ್ನಾಟಕ ಹೈಕೋರ್ಟ್ ತಡೆ

ಬೆಂಗಳೂರು: ಸಿಎಂ ಸಿದ್ದರಾಮಯ್ಯ ವಿರುದ್ಧ ಹೇಳಿಕೆ ನೀಡಿ ಸಮುದಾಯಗಳ ನಡುವೆ ದ್ವೇಷ ಹರಡಿದ ಆರೋಪದ ಮೇಲೆ ಯುವಾ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ವಿರುದ್ಧ ದಾಖಲಾಗಿದ್ದ ಎಫ್‌ಐಆರ್‌ಗೆ ಕರ್ನಾಟಕ ಹೈಕೋರ್ಟ್ ಗುರುವಾರ ತಡೆಯಾಜ್ಞೆ ನೀಡಿದೆ.

ಚಕ್ರವರ್ತಿ ಸೂಲಿಬೆಲೆ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್‌ನ ಧಾರವಾಡ ಪೀಠದಲ್ಲಿ ನ್ಯಾಯಮೂರ್ತಿ ಶಿವಶಂಕರ ಅಮರಣ್ಣನವರ್ ಅವರು ತಡೆ ನೀಡಿ ವಿಚಾರಣೆಯನ್ನು ಮುಂದೂಡಿದರು.

ಅಕ್ಟೋಬರ್ 3 ರಂದು ಕಾರವಾರದ ದೇವಸ್ಥಾನಕ್ಕೆ ಭೇಟಿ ನೀಡಿದ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾಡಿದ ಹೇಳಿಕೆಗಳಿಗಾಗಿ ಕಾರವಾರ ಗ್ರಾಮಾಂತರ ಪೊಲೀಸರು ಚಕ್ರವರ್ತಿ ಸೂಲಿಬೆಲೆ ವಿರುದ್ಧ ಅಕ್ಟೋಬರ್ 5, 2023 ರಂದು ಎಫ್‌ಐಆರ್ ದಾಖಲಿಸಿದ್ದರು.

ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬಂದಾಗಲೆಲ್ಲಾ ಹಿಂದೂಗಳು ತೊಂದರೆ ಎದುರಿಸುತ್ತಿದ್ದಾರೆ ಮತ್ತು ಅವರು ಮುಸ್ಲಿಮರನ್ನು ಬೆಂಬಲಿಸುವವರೆಗೂ ಇಂತಹ ಘಟನೆಗಳು ನಡೆಯುತ್ತಲೇ ಇರುತ್ತವೆ ಎಂದು ಸೂಲಿಬೆಲೆ ಆರೋಪಿಸಿದ್ದರು.




ಹಿಂದೂಗಳು ಮತ್ತು ಮುಸ್ಲಿಮರ ನಡುವೆ ದ್ವೇಷವನ್ನು ಹುಟ್ಟುಹಾಕಲು ಪ್ರಯತ್ನಿಸುವ ಹಲವಾರು ಇತರ ಹೇಳಿಕೆಗಳನ್ನು ಅವರು ನೀಡಿದ್ದಾರೆ ಎಂದು ಎಫ್‌ಐಆರ್ ನಲ್ಲಿ ಉಲ್ಲೇಖಿಸಲಾಗಿತ್ತು.

ಅದರಂತೆ ಭಾರತೀಯ ದಂಡ ಸಂಹಿತೆಯ (ಐಪಿಸಿ) ಸೆಕ್ಷನ್ 505 (2) (ವರ್ಗಗಳ ನಡುವೆ ದ್ವೇಷ, ದ್ವೇಷ ಅಥವಾ ದುಷ್ಟತನವನ್ನು ಸೃಷ್ಟಿಸುವ ಅಥವಾ ಉತ್ತೇಜಿಸುವ ಹೇಳಿಕೆಗಳು) ಅಡಿಯಲ್ಲಿ ಸೂಲಿಬೆಲೆ ವಿರುದ್ಧ ಆರೋಪ ಹೊರಿಸಿ ಎಫ್‌ಐಆರ್ ದಾಖಲಿಸಲಾಗಿದೆ.

## ಸಿಎಂ ಪುತ್ರ ಯಾವ ವಿಚಾರದ ಬಗ್ಗೆ ಮಾತನಾಡಿದ್ದಾರೋ ಗೊತ್ತಿಲ್ಲ: ಸಚಿವ ಸತೀಶ್ ಜಾರಕಿಹೊಳಿ



ಬೆಂಗಳೂರು: ಸಿಎಂ ಪುತ್ರ ಯತೀಂದ್ರ ಯಾವ ವಿಚಾರದ ಬಗ್ಗೆ ಅವರು ಮಾತನಾಡಿದ್ದಾರೋ ಗೊತ್ತಿಲ್ಲ. ಇದಕ್ಕೆ ಸ್ಪಷ್ಟೀಕರಣ ಕೊಡಬೇಕಾಗತ್ತೆ, ಯಾವ ಸಂದರ್ಭದಲ್ಲಿ ಮಾತನಾಡಿದ್ದು ಏನು ಅಂತ ಇದರಲ್ಲಿ ಎಷ್ಟು ರಿಯಾಲಿಟಿ ಇದೆ ನೋಡಬೇಕು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ವರ್ಗಾವಣೆ ಬಗ್ಗೆ ಸಿಎಂ ಪುತ್ರ ಯತೀಂದ್ರ ವಿಡಿಯೋ ವೈರಲ್ ವಿಚಾರವಾಗಿ ಮಾಧ್ಯಮದವರ ಜತೆ ಮಾತನಾಡಿದ ಅವರು, ಯಾವ ವಿಚಾರದ ಬಗ್ಗೆ ಅವರು ಮಾತನಾಡಿದ್ದಾರೋ ಗೊತ್ತಿಲ್ಲ. ನಂತರ ಸಂಬಂಧ ಪಟ್ಟವರು ಸ್ಪಷ್ಟನೆ ಕೊಡುತ್ತಾರೆ. ಕುಮಾರಸ್ವಾಮಿಯವರ ಆರೋಪಕ್ಕೆ ನಾನು ಉತ್ತರ ಕೊಡಲು ಆಗಲ್ಲ. ಸಂಬಂಧ ಪಟ್ಟವರು ಅದಕ್ಕೆ ಸ್ಪಷ್ಟೀಕರಣ ಕೊಡಬೇಕಾಗುತ್ತದೆ. ಅದು ನನ್ನ ಇಲಾಖೆ ಅಲ್ಲ ನನಗೆ ಸಂಬಂಧಪಟ್ಟ ವಿಚಾರ ಇಲ್ಲ ಎಂದರು.

## ಚಿತ್ರದುರ್ಗ ಜಿಲ್ಲಾ ಕಾರಾಗೃಹದಿಂದ ಮುರುಘಾಶ್ರೀ ಬಿಡುಗಡೆ

ಚಿತ್ರದುರ್ಗ: ಪೋಕ್ಸೋ ಪ್ರಕರಣದಲ್ಲಿ ಸಂಬಂಧ ಜೈಲು ಪಾಲಾಗಿದ್ದ ಚಿತ್ರದುರ್ಗದ ಮುರುಘಾಶ್ರೀಗೆ ಜಾಮೀನು ಸಿಕ್ಕಿದ್ದು, ಇದೀಗ ಚಿತ್ರದುರ್ಗ ಜಿಲ್ಲಾ ಕಾರಾಗೃಹದಿಂದ ಮುರುಘಾಶ್ರೀ ಬಿಡುಗಡೆಯಾಗಿದ್ದಾರೆ.



ಮಠದ ಹಾಸ್ಟೆಲ್‌ನಲ್ಲಿದ್ದ ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಆರೋಪದಲ್ಲಿ ಸಿಲುಕಿ, ಪೋಕ್ಸೋ ಕೇಸ್ ದಾಖಲಾಗಿ ಕಳೆದ ವರ್ಷ ಮುರುಘಾ ಶರಣರು ಜೈಲು ಸೇರಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್, ನವೆಂಬರ್ 8ರಂದು ಜಾಮೀನು ನೀಡಿತ್ತು ಹೀಗಾಗಿ ಇಂದು ಮುರುಘಾಶ್ರೀ ಬರೋಬ್ಬರಿ 14 ತಿಂಗಳು ಬಳಿಕ ಜೈಲಿನಿಂದ ಬಿಡುಗಡೆಯಾಗಿದ್ದಾರೆ.

ಮಠದ ಹಾಸ್ಟೆಲ್‌ನಲ್ಲಿದ್ದ ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಆರೋಪದಲ್ಲಿ ಮುರುಘಾಶ್ರೀಗಳ ವಿರುದ್ಧ ವಿರುದ್ಧ ಎರಡು ಪೋಕ್ಸೋ ಪ್ರಕರಣಗಗಳು ದಾಖಲಾಗಿದ್ದವು.

ಈ ಪೈಕಿ ಒಂದೇ ಕೇಸ್ನಲ್ಲಿ ಮಾತ್ರ ಮುರುಘಾಶ್ರೀಗಳನ್ನು ಬಂಧಿಸಲಾಗಿತ್ತು. ಇದೇ ಒಂದನೇ ಪ್ರಕರಣರದಲ್ಲಿ ನವೆಂಬರ್ 8ರಂದು ಹೈಕೋರ್ಟ್ ಷರತ್ತುಬದ್ಧ ಜಾಮೀನು ನೀಡಿತ್ತು. ಹೀಗಾಗಿ ಚಿತ್ರದುರ್ಗ ಜಿಲ್ಲಾ ಕಾರಾಗೃಹದಿಂದ ಮುರುಘಾಶ್ರೀಗಳನ್ನು ಬಿಡುಗಡೆ ಮಾಡಲಾಗಿದೆ.

## ಟಿಕೆಟ್ ರಹಿತ ಪ್ರಯಾಣ: 7 ಲಕ್ಷ ರೂ ದಂಡ ವಸೂಲಿ ಮಾಡಿದ ಬಿಎಂಟಿಸಿ

ಬೆಂಗಳೂರು: ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ(ಬಿಎಂಟಿಸಿ)ಬಸ್ ಗಳಲ್ಲಿ ಟಿಕೆಟ್ ಪಡೆಯದೇ ಅನಧಿಕೃತವಾಗಿ ಪ್ರಯಾಣಿಸುವ ಹಾಗೂ ಮಹಿಳೆಯರಿಗೆ ಮೀಸಲಾದ ಆಸನದಲ್ಲಿ ಕುಳಿತುಕೊಳ್ಳುವ ಪುರುಷರನ್ನು ಪತ್ತೆ ಹಚ್ಚಿ ದಂಡ ಹಾಕಿದ್ದು, ಈ ಮೊತ್ತ 7 ಲಕ್ಷ ರೂ ಗಳನ್ನು ದಾಡಿದೆ ಎಂದು ತಿಳಿದುಬಂದಿದೆ.

ಕಳೆದ ತಿಂಗಳಿನಲ್ಲಿ ಒಟ್ಟು 6,99,325 ರೂ. ಗಳನ್ನು ದಂಡವಾಗಿ ವಸೂಲಿ ಮಾಡಲಾಗಿದೆ. ಬಸ್ ನಲ್ಲಿ ಟಿಕೆಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ನಗರದಾದ್ಯಂತ ಸಂಚರಿಸುವ ವಾಹನಗಳನ್ನು ಸಂಸ್ಥೆಯ ತನಿಖಾ ತಂಡಗಳು ಅಕ್ಟೋಬರ್ ತಿಂಗಳಿನಲ್ಲಿ ಒಟ್ಟು 15,165 ಟ್ರಿಪ್‌ಗಳನ್ನು ತಪಾಸಣೆ ನಡೆಸಿವೆ.

ಸುಮಾರು 3350 ಟಿಕೆಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ ಅವರಿಂದ 6,72,125ರೂ.ದಂಡ ವಸೂಲಿ ಮಾಡಿ, ಸಂಸ್ಥೆಯ ನಿರ್ವಾಹಕರ ವಿರುದ್ಧ 953 ಪ್ರಕರಣಗಳನ್ನು ದಾಖಲಿಸಲಾಗಿದೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ



ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 272 ಪುರುಷ ಪ್ರಯಾಣಿಕರಿಂದ ಒಟ್ಟು 27,200 ರೂ.ದಂಡ ವಿಧಿಸಲಾಗಿರುತ್ತದೆ.

ಪ್ರಯಾಣಿಕರು ಬಿಎಂಟಿಸಿ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೆಟ್, ದಿನದ ಪಾಸು, ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಸಂಸ್ಥೆಯು ಉತ್ತಮ ಸೇವೆಯನ್ನು ನೀಡಲು ಸಹಾಯವಾಗುತ್ತದೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕು ಎಂದು ಪ್ರಯಾಣಿಕರಲ್ಲಿ ಸಂಸ್ಥೆಯು ಮನವಿ ಮಾಡಿದೆ.

## ಭಾರತ ಕ್ರಿಕೆಟ್ ತಂಡ ಫೈನಲ್ ಗೆದ್ದರೆ ಬೆತ್ತಲಾಗುವೆ ಎಂದ ನಟಿ



ಮುಂಬೈ: ನಿನ್ನೆಯಷ್ಟೇ ಭಾರತ ಕ್ರಿಕೆಟ್ ತಂಡ ಸೆಮಿ ಫೈನಲ್ ಗೆದ್ದು, ಫೈನಲ್ ತಲುಪಿದೆ. ಇಡೀ ದೇಶಕ್ಕೆ ದೇಶವೇ ಟೀಮ್ ಬಗ್ಗೆ ಕೊಂಡಾಡುತ್ತಿದೆ. ಆದರೆ, ನಟಿ ತೆಲುಗಿನ ನಟಿ ರೇಖಾ ಬೊಜ್ ಮತ್ತೊಂದು ರೀತಿಯಲ್ಲಿ ಸಂಭ್ರಮಿಸುತ್ತಿದ್ದಾರೆ.

ಭಾರತ ಕ್ರಿಕೆಟ್ ತಂಡವು ಫೈನಲ್ ನಲ್ಲಿ ಗೆದ್ದರೆ ತಾವು ವಿಶಾಖಪಟ್ಟಣಂ ಬೀಚ್ ನಲ್ಲಿ ಬೆತ್ತಲೆಯಾಗಿ ನಡೆಯುತ್ತೇನೆ ಎಂದು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. 12 ವರ್ಷಗಳ ಹಿಂದೆ ಬಾಲಿವುಡ್ ನಟಿ ಪೂನಂ ಪಾಂಡೆ ಅವರು ಇಂಥದ್ದೊಂದು ಸ್ಟೇಟ್ ಮೆಂಟ್ ಕೊಟ್ಟು ಪ್ರಸಿದ್ಧಿಯಾಗಿದ್ದರು. ಭಾರತ ತಂಡ ವಿಶ್ವಕಪ್ ಗೆದ್ದರೆ ಮುಂಬೈ ಬೀದಿಗಳಲ್ಲಿ ಬೆತ್ತಲೆಯಾಗಿ ಓಡಾಡುತ್ತೇನೆ ಎಂದು ಹೇಳಿ ಬಿಟ್ಟಿ ಪ್ರಚಾರ ಪಡೆದಿದ್ದರು. ಇದೀಗ ಇಂಥದ್ದೇ ಹಾದಿಯನ್ನು ತುಳಿದಿದ್ದಾರೆ ನಟಿ ರೇಖಾ.

ರೇಖಾ ಆಗಿರುವ ಪೋಸ್ಟ್ ಗ ಸಾಕಷ್ಟು ಜನರು ಪ್ರತಿಕ್ರಿಯೆ ನೀಡಿದ್ದಾರೆ. ಭಾರತ ಗೆಲ್ಲುತ್ತದೆ. ಅಂದು ನಾವು ಬೀಚ್ ನಲ್ಲಿ ಕಾಯುತ್ತೇವೆ ಎಂದು ಹಲವರು ಕಾಮೆಂಟ್ ಮಾಡಿದ್ದಾರೆ. ದಿನಾಂಕ ಮತ್ತು ಸಮಯವನ್ನು ತಿಳಿಸಿಲ್ಲ ಎಂದು ಹಲವರು ಪ್ರಶ್ನೆ ಮಾಡಿದ್ದಾರೆ. ಇನ್ನೂ ಕೆಲವರು ಮಾತಿಗೆ ತಪ್ಪಬಾರದು ಎಂದು ವಿನಂತಿಸಿದ್ದಾರೆ.

ಸೋಷಿಯಲ್ ಮೀಡಿಯಾದಲ್ಲಿ ಸದಾ ವಿವಾದಾತ್ಮಕ ಪೋಸ್ಟ್ ಮಾಡುವ ಮೂಲಕ ಸುದ್ದಿಯಾಗುವ ರೇಖಾ, ರಂಗೀಲಾ, ಸ್ವಾತಿ ಚಿನುಕು ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ. ಆದರೆ, ಹೇಳಿಕೊಳ್ಳುವಂತಹ ಯಶಸ್ಸು ಅವರಿಗೆ ಸಿಕ್ಕಿಲ್ಲ. ಹೀಗಾಗಿ ಪದೇ ಪದೇ ವಿವಾದಾತ್ಮಕ ಪೋಸ್ಟ್ ಗಳನ್ನು ಇವರು ಹಂಚಿಕೊಳ್ಳುತ್ತಲೇ ಇರುತ್ತಾರೆ.

## ದಕ್ಷಿಣ ಕನ್ನಡ: 5 ಮಂದಿ ಬಜರಂಗದಳ ಕಾರ್ಯಕರ್ತರಿಗೆ ನೋಟಿಸ್ ಜಾರಿ ಮಾಡಿದ ಪೋಲೀಸರು

ದಕ್ಷಿಣ ಕನ್ನಡ: ಕೋಮು ಘರ್ಷಣೆ, ಹಸು ಸಾಗಾಟ, ನೈತಿಕ ಪೊಲೀಸ್‌ಗಿರಿ ಮತ್ತು ಇತರ ಪ್ರಕರಣಗಳಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ದಕ್ಷಿಣ ಕನ್ನಡ ಜಿಲ್ಲೆಯ ಐವರು ಬಜರಂಗದಳದ ಕಾರ್ಯಕರ್ತರಿಗೆ ಅಧಿಕಾರಿಗಳು ಎಚ್ಚರಿಕೆ ನೋಟಿಸ್ ಜಾರಿ ಮಾಡಿದ್ದಾರೆ.

ಅಲ್ಲದೆ, ಅವರನ್ನು ಬೇರೆ ಜಿಲ್ಲೆಗಳಿಗೆ ಏಕೆ ಗಡಿಪಾರು ಮಾಡಬಾರದು ಎಂದು ಸಹ ನೋಟಿಸ್‌ನಲ್ಲಿ ಕೇಳಲಾಗಿದೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ.

ದಿನೇಶ್, ಪ್ರಜ್ವಲ್, ಲತೇಶ್ ಗುಂಡ್ಯ, ನಿಶಾಂತ್ ಮತ್ತು ಪ್ರದೀಪ್ ಅವರಿಗೆ ನೋಟಿಸ್ ನೀಡಲಾಗಿದೆ



ಎಂದು ಮೂಲಗಳು ತಿಳಿಸಿವೆ. ಲತೇಶ್ ಗುಂಡ್ಯ ಅವರು ಪುತ್ತೂರು ಜಿಲ್ಲೆಯ ಬಜರಂಗದಳದ ಸಹ ಸಮಯೋಜಕರಾಗಿದ್ದಾರೆ.

ಪ್ರಜ್ವಲ್ ಮತ್ತು ದಿನೇಶ್ ಬಜರಂಗದಳದಲ್ಲಿ ತಾಲೂಕು ಮಟ್ಟದ ಜವಾಬ್ದಾರಿಯನ್ನು ಹೊಂದಿದ್ದು, ಇನ್ನಿಬ್ಬರು ಬಲಪಂಥೀಯ ಸಂಘಟನೆಯ ಸ್ವಯಂಸೇವಕರಾಗಿದ್ದಾರೆ.

ಅವರನ್ನು ಏಕೆ ವಜಾಗೊಳಿಸಬಾರದು ಎಂದು ಪ್ರಶ್ನಿಸಿ ನವೆಂಬರ್ 22ರಂದು ಪುತ್ತೂರಿನಲ್ಲಿ ಸಹಾಯಕ ಆಯುಕ್ತರ ಮುಂದೆ ಹಾಜರಾಗುವಂತೆ ನೋಟಿಸ್‌ನಲ್ಲಿ ತಿಳಿಸಲಾಗಿದೆ.

ಕರ್ನಾಟಕ ಪೊಲೀಸ್ ಕಾಯ್ದೆ, 1953ರ ಸೆಕ್ಷನ್ 55ರ ಅಡಿಯಲ್ಲಿ ನೋಟಿಸ್ ನೀಡಲಾಗಿದೆ. ಒಮ್ಮೆ ಅವರು ಆಯುಕ್ತರ ಮುಂದೆ ಹಾಜರಾದರೆ, ಅವರ ಮೇಲೆ ಒಂದು ವರ್ಷ ಕಾಲ ಪ್ರವೇಶ ನಿರ್ಬಂಧಿಸುವ ಆದೇಶವನ್ನು ಜಾರಿಗೊಳಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

ಜುಲೈನಲ್ಲಿ ಮಂಗಳೂರು ನಗರದಿಂದ ಮೂವರು ಬಜರಂಗದಳ ಕಾರ್ಯಕರ್ತರನ್ನು ಹೊರಹಾಕಲಾಗಿತ್ತು. ಆದರೆ, ಬಜರಂಗ ದಳ ಸಂಘಟನೆಯು ಸರ್ಕಾರದ ಈ ಆದೇಶವನ್ನು ಪ್ರಶ್ನಿಸಿ ನ್ಯಾಯಾಲಯದ ಮೊರೆ ಹೋಗಿ ತಡೆಯಾಜ್ಞೆ ಪಡೆದಿತ್ತು.

## ನನಗೆ ಡಬಲ್ ಗೇಮ್ ಆಡೋದು ಗೊತ್ತಿಲ್ಲ: ವಿ ಸೋಮಣ್ಣ ಅಸಮಾಧಾನ



ಬೆಂಗಳೂರು : ಡಿಸಿಎಂ ಅಡಿಕೆ ಶಿವಕುಮಾರ್ ಜೊತೆ ವಿ ಸೋಮಣ್ಣ ಚರ್ಚೆ ವಿಚಾರವಾಗಿ ಮಾತನಾಡಿದ ಮಾಜಿ ಸಚಿವ ವಿ ಸೋಮಣ್ಣ ನನಗೆ ಡಬಲ್ ಗೇಮ್ ಆಡೋಕೆ ಬರಲ್ಲ ಎಂದು ಬಿಜೆಪಿ ವಿರುದ್ಧ ಮತ್ತೆ ಆಸಮಾಧಾನ. ಹೊರ ಹಾಕಿದ್ದರೆ.

ಬೆಂಗಳೂರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅದೆಲ್ಲ ಆಗಿರುತ್ತೆ ಆದರೆ ಕಾಂಗ್ರೆಸ್ ಸೇರುವ ಅವಶ್ಯಕತೆ ಇಲ್ಲ. ಭಾರತೀಯ ಜನತಾ ಪಕ್ಷಕ್ಕೆ ನನ್ನದು ದುಡಿಮೆ ಶ್ರಮ ಇದೆ ನನಗೆ ಡಬಲ್ ಗೇಮ್ ಮಾಡೋದು ಗೊತ್ತಿಲ್ಲ ನನ್ನ ಅಭಿಪ್ರಾಯವನ್ನು ಮುಂದಿನ ದಿನಗಳಲ್ಲಿ ತಿಳಿಸುತ್ತೇನೆ. ಪಾಪ್ಯುಲರ್ ಆದವರಿಗೆ ಮುಜುಗರ ಸಂಗತಿಗಳು ಆಗುತ್ತವೆ ಎಂದು ತಿಳಿಸಿದರು.ನಾನು ಯಾವುದೇ ಲೋಕಸಭಾ ಟಿಕೆಟ್ ಆಕಾಂಕ್ಷಿಯಾಗಿಲ್ಲ. ಎಂದು ರವಿ ಸೋಮಣ್ಣ ಮತ್ತೆ ಬಿಜೆಪಿ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ.

## ಚೆನ್ನೈನಲ್ಲಿರುವ ಕರ್ನಾಟಕ ಮೂಲದ ಜವಳಿ ಉದ್ಯಮಿಯ ಮನೆ ಮೇಲೆ ಐಟಿ ದಾಳಿ

ಚೆನ್ನೈ: ತಮಿಳುನಾಡಿನ ಚೆನ್ನೈನ ತ್ಯಾಗರಾಯನಗರ ರಾಧಾಕೃಷ್ಣನ್ ಸ್ಟ್ರೀಟ್‌ನಲ್ಲಿರುವ ಕರ್ನಾಟಕ ಮೂಲದ ಜವಳಿ ಉದ್ಯಮಿಯೊಬ್ಬರ ಮನೆ ಮೇಲೆ ಆದಾಯ ತೆರಿಗೆ ಅಧಿಕಾರಿಗಳು ಗುರುವಾರ ದಾಳಿ ನಡೆಸಿದ್ದಾರೆ. ಆದಾಯ ತೆರಿಗೆ ಅಧಿಕಾರಿಯೊಬ್ಬರ ಕಾರು ಮನೆಯ ಹೊರಗೆ ನಿಲ್ಲಿಸಿರುವ ದೃಶ್ಯಗಳು ಕಂಡುಬಂದಿದ್ದು, ಚೆನ್ನೈ ಪೊಲೀಸರನ್ನೂ ಭದ್ರತೆಗೆ ನಿಯೋಜಿಸಲಾಗಿದೆ.

ಈ ಸಂಬಂಧ ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗುತ್ತಿದೆ. ಇದಕ್ಕೂ ಮುನ್ನ ನವೆಂಬರ್ 7 ರಂದು ತಿರುವಣ್ಣಾಮಲೈನಲ್ಲಿ




ತಮಿಳುನಾಡಿನ ಲೋಕೋಪಯೋಗಿ ಮತ್ತು ಹೆದ್ದಾರಿ ಇಲಾಖೆ ಸಚಿವ ಇವಿ ವೇಲು ಅವರಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಆದಾಯ ತೆರಿಗೆ ಇಲಾಖೆ ದಾಳಿ ನಡೆಸಿತ್ತು. ಸಚಿವರಿಗೆ ಸಂಬಂಧವಿದೆ ಎನ್ನಲಾದ ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗಿದೆ. ಈ ಹಿಂದೆ, ಇಂಡಿಯಾ ಪ್ರೈವೇಟ್ ಲಿಮಿಟೆಡ್ ಮತ್ತು ರಾಧಾ ಇಂಜಿನಿಯರಿಂಗ್ ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಸೇರಿದಂತೆ ಚೆನ್ನೈನ ಸುಮಾರು 10 ಸ್ಥಳಗಳಲ್ಲಿ ದಾಳಿಗಳನ್ನು ನಡೆಸಲಾಯಿತು. ಅಕ್ಟೋಬರ್‌ನಲ್ಲಿ, ಡಿಎಂಕೆ ಸಂಸದ ಎಸ್ ಜಗತ್ರಕ್ಷಕನ್‌ಗೆ ಸಂಬಂಧಿಸಿದ ಅನೇಕ ಸ್ಥಳಗಳಲ್ಲಿ ಕೂಡ ಐಟಿ ಅಧಿಕಾರಿಗಳು ಶೋಧ ನಡೆಸಿದ್ದರು. ಶಂಕಿತ ತೆರಿಗೆ ವಂಚನೆಗೆ ಸಂಬಂಧಿಸಿದಂತೆ ಅರಕ್ಕೋಣಂ ಸಂಸದರ ಅಡ್ಯಾರ್‌ನಲ್ಲಿರುವ ನಿವಾಸ ಮತ್ತು ಕಚೇರಿ ಮತ್ತು ಕೆಲವು ಶಿಕ್ಷಣ ಸಂಸ್ಥೆಗಳು ಸೇರಿದಂತೆ 40 ಕ್ಕೂ ಹೆಚ್ಚು ಸ್ಥಳಗಳಲ್ಲಿ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

## ಭಾರತ ಸರ್ಕಾರ: ಕುಶಲಕರ್ಮಿಗಳಿಗಾಗಿ ನೂತನ ಪಿಎಂ ವಿಶ್ವಕರ್ಮ ಯೋಜನೆ ಜಾರಿ; ಅರ್ಹರಿಂದ ನೊಂದಣಿ ಮತ್ತು ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ: ಭಾರತ ಸರ್ಕಾರವು ಪಿ.ಎಂ–ವಿಶ್ವಕರ್ಮ ಎಂಬ ಹೊಸ ಯೋಜನೆಯನ್ನು ನವೆಂಬರ್ 17 ರಂದು ಜಾರಿಗೊಳಿಸಿದೆ. ಈ ಯೋಜನೆಯಡಿಯಲ್ಲಿ ಒಟ್ಟು 18 ಚಟುವಟಿಕೆಗಳಲ್ಲಿ ತೊಡಗಿರುವ ಕುಶಲಕರ್ಮಿಗಳಿಗೆ ಪಿ.ಎಂ. ವಿಶ್ವಕರ್ಮ ಪ್ರಮಾಣ ಪತ್ರ, ಐ.ಡಿ. ಕಾರ್ಡ, ಕೌಶಲ್ಯಾಭಿವೃದ್ಧಿ ತರಬೇತಿ, ಸುಧಾರಿತ ಉಪಕರಣಗಳಿಗೆ ಪ್ರೋತ್ಸಾಹ, ಸಾಲ ಸೌಲಭ್ಯ, ಡಿಜಿಟಲ್ ವ್ಯವಹಾರಕ್ಕೆ ಪ್ರೋತ್ಸಾಹ, ಮಾರುಕಟ್ಟೆ ಬೆಂಬಲ ಸೌಲಭ್ಯ ಸವಲತ್ತುಗಳನ್ನು ನೀಡಲಾಗುವುದು.

ಈ ಯೋಜನೆಯಲ್ಲಿ ಬಡಗಿತನ, ದೋಣಿ ತಯಾರಿಕೆ, ಶಸ್ತ್ರಾಸ್ತ್ರ ತಯಾರಿಕೆ, ಕಮ್ಮಾರ, ಸುತ್ತಿಗೆ ಮತ್ತು ಟೂಲ್ ಕಿಟ್ ತಯಾರಿಕೆ, ಬೀಗ ತಯಾರಕರು. ಶಿಲ್ಪಕಲೆ, ಕಲ್ಲುಪುಡಿ ಮಾಡುವವರು, ಬಂಗಾರದ ಆಭರಣ ತಯಾರಿಕೆ (ಅಕ್ಕಸಾಲಿಗರು), ಕುಂಬಾರಿಕೆ, ಪಾದರಕ್ಷೆ, ಚರ್ಮಗಾರಿಕೆ ತಯಾರಿಕೆ, ಅನುವಂಶಿಕ ರಾಜ ಮೇಸ್ತ್ರಿ (ಬಂಡಿವಡ್ಡರ), ಕಸಬರಿಗೆ, ಬಾಸ್ಕೆಟ್, ಮ್ಯಾಟ್, ಬಿದಿರಿನ ಉತ್ಪನ್ನ ತಯಾರಿಕೆ, ತೆಂಗಿನ ನಾರಿನ ಉತ್ಪನ್ನ ತಯಾರಕರು, ಗೊಂಬೆ ತಯಾರಕರು, ಕ್ಷೌರಿಕ, ಹೂ–ಮಾಲೆ ತಯಾರಕರು, ಧೋಬಿ, ಸಿಂಪಿಗರು ಹಾಗೂ ಮೀನಿನ ಬಲೆಗಳನ್ನು ತಯಾರಿಸುವವರು.

ಚಟುವಟಿಕೆಗಳಲ್ಲಿ ತೊಡಗಿರುವ ಕುಶಲಕರ್ಮಿಗಳು ನಗರ, ಗ್ರಾಮ ಪಂಚಾಯತ್ ಮಟ್ಟದಲ್ಲಿರುವ ಸಾಮಾನ್ಯ ಸೇವಾ ಕೇಂದ್ರ (CSC) ದಲ್ಲಿ ನೊಂದಣಿಯನ್ನು ಮಾಡಬಹುದಾಗಿದೆ.

ನೊಂದಣಿಗೆ ಇರುವ ಅರ್ಹತೆಗಳು: ಕುಶಲಕರ್ಮಿಗಳು 18 ವೃತ್ತಿಗಳಲ್ಲಿ ಯಾವುದಾದರೂ ಒಂದರಲ್ಲಿ ಸ್ವಯಂ ಉದ್ಯೋಗಿಯಾಗಿರಬೇಕು, 18 ವರ್ಷ ಮೇಲ್ಪಟ್ಟವರಾಗಿರಬೇಕು, ಒಂದು ಕುಟುಂಬದಲ್ಲಿ ಒಬ್ಬ ಸದಸ್ಯರು ಮಾತ್ರ ನೊಂದಣಿಗೆ ಅರ್ಹರು, ಕುಟುಂಬದಲ್ಲಿ ಯಾವುದೇ ಸದಸ್ಯರು ಸರ್ಕಾರಿ ಕೆಲಸದಲ್ಲಿರಬಾರದು, ಕುಶಲಕರ್ಮಿಗಳು ಪಿಎಂಇಜಿಪಿ, ಮುದ್ರಾ ಮತ್ತು ಸ್ವ–ನಿಧಿ ಯೋಜನೆಯಡಿಯಲ್ಲಿ ಯಾವುದೇ ತರಹ ಸಾಲವನ್ನು ಪಡೆದಿರಬಾರದು.

ಮುದ್ರಾ ಮತ್ತು ಸ್ವನಿಧಿ ಯೋಜನೆಯಡಿ ಸಾಲ ಪಡೆದು ಮರುಪಾವತಿ ಮಾಡಿದ್ದರೆ ಅಂತವರು ಅರ್ಜಿ ಸಲ್ಲಿಸಬಹುದು.

ತರಬೇತಿ ವಿವರ: ಕುಶಲಕರ್ಮಿಗಳಿಗೆ ನೊಂದಣಿಯಾದ ನಂತರ ಜಿಲ್ಲಾ ಮಟ್ಟದ ಸಮಿತಿಯಿಂದ ಕುಶಲಕರ್ಮಿ ಎಂದು ದೃಢೀಕರಿಸಿದ ನಂತರ 5 ರಿಂದ 7 ದಿನಗಳ ಕಾಲ ತರಬೇತಿಯನ್ನು ನೀಡಲಾಗುವುದು.

ತರಬೇತಿ ಅವಧಿಯಲ್ಲಿ ದಿನಕ್ಕೆ ರೂ.500 ಕನಿಷ್ಟ ವೇತನ ನೀಡಲಾಗುವುದು. ತರಬೇತಿಯ ನಂತರ ಪ್ರಮಾಣ ಪತ್ರದೊಂದಿಗೆ ರೂ. 15 ಸಾವಿರ ಬೆಲೆಬಾಳುವ ಉಪಕರಣವನ್ನು ನೀಡಲಾಗುವುದು. ನಂತರ ಶೇ.5 ಬಡ್ಡಿದರದಲ್ಲಿ ಮೊದಲ ಹಂತದಲ್ಲಿ ರೂ. 1 ಲಕ್ಷಗಳನ್ನು ಸಾಲವಾಗಿ ನೀಡಲಾಗುವುದು.

ತದನಂತರ 15 ದಿವಸಗಳವರೆಗೆ ಉನ್ನತ ಮಟ್ಟದ ತರಬೇತಿಯನ್ನು ನೀಡಿ ಈಗಾಗಲೇ ಪಡೆದರೂ. 1 ಲಕ್ಷಗಳ ಸಾಲ ಮರುಪಾವತಿಯಾದ ನಂತರ ಎರಡನೇ ಹಂತದಲ್ಲಿ ರೂ. 2 ಲಕ್ಷಗಳ ಸಾಲವನ್ನು ಶೇ.5ರ ಬಡ್ಡಿದರದಲ್ಲಿ ನೀಡಲಾಗುವುದು ಹಾಗೂ ತಾವು ತಯಾರಿಸಲ್ಪಡುವ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ ಒದಗಿಸಲಾಗುವುದು.

ಕುಶಲಕರ್ಮಿಗಳು ಸಂಬಂಧಿಸಿದ ತಮ್ಮ ಗ್ರಾಮ ನಗರ, ಪಂಚಾಯತ್ ವ್ಯಾಪ್ತಿಯಲ್ಲಿ ಸ್ಥಾಪಿತವಾಗಿರುವ ಸಾಮಾನ್ಯ ಸೇವಾ ಕೇಂದ್ರ (CSC) ದಲ್ಲಿ ತ್ವರಿತವಾಗಿ ನೊಂದಣಿ ಮಾಡಿಕೊಳ್ಳಲು ತಾಂತ್ರಿಕ ನಿರ್ವಹಣೆಯಲ್ಲಿ ಸಮಸ್ಯೆ ಇದ್ದಲ್ಲಿ ಪ್ರವೀಣ ನವಲಗುಂದ, ಡಿಸ್ಟ್ರಿಕ್ ಮ್ಯಾನೆಜರ್, ಸಿ.ಎಸ್.ಸಿ, ಧಾರವಾಡ ಮೊ.ಸಂ:7217687808 ಇವರನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಧಾರವಾಡ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು, ಕೌಶಲ್ಯಭಿವೃದ್ಧಿ ಇಲಾಖೆ, ರಾಯಾಪೂರ ಕಛೇರಿಯನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕ ಶಿವಪುತ್ರಪ್ಪ ಆರ್. ಹೆಚ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನಾಂಗದವರ ಜಿಲ್ಲಾ ಮಟ್ಟದ ಕುಂದು ಕೊರತೆ ಸಭೆ ನವೆಂಬರ್ 22 ಕ್ಕೆ ಮುಂದೂಡಿಕೆ

ಧಾರವಾಡ: ಜಿಲ್ಲೆಯಲ್ಲಿನ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಜನಾಂಗದವರು ಸರ್ಕಾರದ ವಿವಿಧ ಸವಲತ್ತುಗಳನ್ನು ಪಡೆಯಲು ವಿವಿಧ ಇಲಾಖೆಗಳಲ್ಲಿ ಎದುರಿಸುತ್ತಿರುವ ತೊಂದರೆಗಳನ್ನು ಪರಿಹರಿಸುವ ಸಲುವಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನವೆಂಬರ್ 17 ರಂದು ಆಯೋಜಿಸಲು ಉದ್ದೇಶಿಸಿದ್ದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನಾಂಗದವರ ಜಿಲ್ಲಾ ಮಟ್ಟದ ಕುಂದಕೊರತೆ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಿ, ನವೆಂಬರ್ 22 ರಂದು ಬೆಳಿಗ್ಗೆ 11 ಗಂಟೆಗೆ ನಿಗದಿ ಮಾಡಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2024–25ನೇ ಶೈಕ್ಷಣಿಕ ಸಾಲಿನಲ್ಲಿ ಹೊಸ ಖಾಸಗಿ ಶಾಶ್ವತ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿ ಅಹ್ವಾನ

ಧಾರವಾಡ: ಧಾರವಾಡ ಜಿಲ್ಲೆಯಲ್ಲಿ 2024–25ನೇ ಶೈಕ್ಷಣಿಕ ಸಾಲಿನಲ್ಲಿ ಹೊಸದಾಗಿ ಖಾಸಗಿ ಶಾಶ್ವತ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಆನ್ಲೈನ್ ಅರ್ಜಿಯನ್ನು ವೆಬ್ಸೈಟ್ https?://pue.karnataka.gov.in/ ಮೂಲಕ ನ.14,2023 ರಿಂದ ಮಾರ್ಚ್ 31, 2024 ರ ವರೆಗೆ https://dpue-pragathi.karnataka.gov.in/newcollege 2024 ಲಿಂಕ್ ಮೂಲಕ ಅವಕಾಶ ಕಲ್ಪಿಸಲಾಗಿದೆ.

ಆಸಕ್ತರು ಆನ್ ಲೈನ್ ಅರ್ಜಿ ಸಲ್ಲಿಸಿದ ನಂತರ ಒಂದು ಪ್ರತಿಯನ್ನು ಉಪನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಕಾಲೇಜು ರಸ್ತೆ, ಆರ್.ಎನ್. ಶೆಟ್ಟಿ ಕ್ರೀಡಾಂಗಣ ಎದುರು ಧಾರವಾಡ ಇಲ್ಲಿಗೆ ಖುದ್ದಾಗಿ ಸಲ್ಲಿಸಬೇಕೆಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ "ಅಣ್ಣ–ಬಾಪು" ನಾಟಕ ಪ್ರದರ್ಶನ

ಬೆಳಗಾವಿ: ರಂಗಸಂಪದ ಬೆಳಗಾವಿ ಹಾಗೂ ಸಕ್ಕರಿ ಬಾಳಾಚಾರ್ಯ ಶಾಂತಕವಿ ಟ್ರಸ್ಟ್, ಧಾರವಾಡ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ಥ ಮಂಡಳಿ, ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ರಾಣಿ ಚನ್ನಮ್ಮ ವೃತ್ತದಲ್ಲಿರುವ ಕನ್ನಡ ಸಾಹಿತ್ಯ ಭವನದಲ್ಲಿ ಇದೆ ಶನಿವಾರ ನವೆಂಬರ್ 18 ರಂದು ಸಂಜೆ 5–00 ಗಂಟೆಗೆ "ಆಧುನಿಕ ಕನ್ನಡ ರಂಗಭೂಮಿ ದಿನ" ಅಂಗವಾಗಿ ರಂಗಸಂಪದವು ದಿ.ಸಿಂಪಿ ಲಿಂಗಣ್ಣ ಅವರು ಬರೆದ, ಡಾ.ಅರವಿಂದ ಕುಲಕರ್ಣಿ ಅವರು ನಿರ್ದೇಶಿಸಿರುವ, "ಅಣ್ಣ–ಬಾಪು" ದ್ವಿ–ಪಾತ್ರಗಳ ಕಿರು ನಾಟಕ ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಅಂದು ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಹಿರಿಯ ಪತ್ರಕರ್ತರಾದ ಡಾ.ಸರಜೂ ಕಾಟಕರ ಹಾಗೂ ಹಿರಿಯ ಸಾಹಿತಿಗಳಾದ ಡಾ.ರಾಮಕೃಷ್ಣ ಮರಾಠೆ ಆಗಮಿಸಲಿರುವರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ನ್ಯಾಯವಾದಿಗಳಾದ ಎಸ್.ಎಂ.ಕುಲಕರ್ಣಿ ವಹಿಸಲಿರುವರು. ಈ ಹಿನ್ನೆಲೆಯಲ್ಲಿ ಬೆಳಗಾವಿಯ ರಂಗಾಸಕ್ತರು ಈ ಕಾರ್ಯಕ್ರಮಕ್ಕೆ ಆಗಮಿಸಬೇಕಾಗಿ ರಂಗಸಂಪದವು ಪ್ರಕಟಣೆಯಲ್ಲಿ ಕೋರಿದೆ.

# ಬೆಳಗಾವಿ ಪತ್ರಕರ್ತರು ಅಪ್ರಭುದ್ಧರು ಎನ್ನುವ ಅರ್ಥದಲ್ಲಿ ನೀಡಿದ್ದ ಹೇಳಿಕೆಯನ್ನ ಖಂಡಿಸಿ ಕನ್ನಡ ಸಾಹಿತ್ಯ ಭವನದಲ್ಲಿ ಪತ್ರಕರ್ತರಿಂದ ಖಂಡನಾ ಸಭೆ



ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಬೆಳಗಾವಿ ಪತ್ರಕರ್ತರು ಅಪ್ರಭುದ್ಧರು ಎನ್ನುವ ಅರ್ಥದಲ್ಲಿ ನೀಡಿದ್ದ ಹೇಳಿಕೆಯನ್ನ ಖಂಡಿಸಿ ಕನ್ನಡ ಸಾಹಿತ್ಯ ಭವನದಲ್ಲಿ ಪತ್ರಕರ್ತರಿಂದ ಖಂಡನಾ ಸಭೆ ನಡೆಸಲಾಯಿತು.

ಸಭೆಯಲ್ಲಿ 42 ಕ್ಕೂ ಅಧಿಕ ಹಿರಿಯ ಪತ್ರಕರ್ತರು ಭಾಗಿಯಾಗಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಹೇಳಿಕೆಯನ್ನ ತೀವ್ರವಾಗಿ ಖಂಡಿಸಲಾಯಿತು.

ಸಚಿವೆ ಹೆಬ್ಬಾಳ್ಕರ ಅವರು ಇತ್ತೀಚೆಗೆ ಪತ್ರಕರ್ತರ ಜೊತೆ ನಡೆದುಕೊಳ್ಳುತ್ತಿರುವ ನಡುವಳಿಕೆ ಬಗ್ಗೆ ಹಿರಿಯ ಪತ್ರಕರ್ತರು ತೀವ್ರ ಆಕ್ರೋಶ, ಅಸಮಾಧಾನ ವ್ಯಕ್ತಪಡಿಸಿದರು.

ಸಭೆಯಲ್ಲಿ ಸಚಿವೆ ಹೆಬ್ಬಾಳ್ಕರ ವಿರುದ್ಧ ಐದು ಪ್ರಮುಖ ಖಂಡಣಾ ನಿರ್ಣಯವನ್ನ ತೆಗೆದುಕೊಳ್ಳಲಾಯಿತು.

**ಖಂಡನಾ ನಿರ್ಣಯಗಳು**

1) ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ ಅವರು ಬೆಳಗಾವಿ ಪತ್ರಕರ್ತರ ವಿರುದ್ಧ ನೀಡಿದ್ದ ಹೇಳಿಕೆಯನ್ನ ಖಂಡಿಸಲಾಯಿತು.

2) ಸಚಿವರು ತಮ್ಮ ಹೇಳಿಕೆಯನ್ನ ಕೂಡಲೇ ಹಿಂಪಡೆದು ಕೊಂಡು ಬೇಷರತ್ತಾಗಿ ಕ್ಷಮೆಯಾಚಿಸಬೇಕೆಂದು ಒಕ್ಕೊರಲಿನಿಂದ ಒತ್ತಾಯಿಸಲು.

3)ಸಚಿವರ ಹೇಳಿಕೆಯ ವಿರುದ್ಧ ಎಐಸಿಸಿ, ಕೆಪಿಸಿಸಿ ಅಧ್ಯಕ್ಷರು ,ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿಗೆ ದೂರು ನೀಡಲು ನಿರ್ಧರಿಸಲಾಯಿತು.

4)ಸಭೆಯಲ್ಲಿ ತೆಗೆದುಕೊಂಡು ಈ ನಿರ್ಣಯಗಳನ್ನ ಪತ್ರಕರ್ತರ ಸಂಘಟನೆಗಳ ಅಧ್ಯಕ್ಷರಗಳ ಗಮನಕ್ಕೆ ತರಲು ನಿರ್ಧರಿಸಲಾಯಿತು.

5) ಇಂದಿನ ಖಂಡನಾ ಸಭೆಯ ನಿರ್ಣಯ ವರದಿಯನ್ನ ಪತ್ರಿಕೆ ಹಾಗೂ ವಿವಿಧ ಮಾಧ್ಯಮದಲ್ಲಿ ಪ್ರಕಟಿಸಲು ನಿರ್ಧರಿಸಲಾಯಿತು.

ನವೆಂಬರ್11 ರಂದು ಕನ್ನಡ ಭವನದಲ್ಲಿ ಪತ್ರಕರ್ತರ ಅಭಿನಂದನಾ ಕಾರ್ಯಕ್ರಮದಲ್ಲಿ ಬೆಳಗಾವಿ ಪತ್ರಕರ್ತರ ಬಗ್ಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಗರುವಾಗಿ ಮಾತನಾಡಿದ್ದರು.

## ಸಕಾರಾತ್ಮಕ ದೃಷ್ಟಿಕೋನದಿಂದ ಮಾತನಾಡಿದ್ದೇನೆ, ಅನ್ಯಥಾ ಭಾವಿಸಬೇಡಿ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮನವಿ



ಬೆಳಗಾವಿ: ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರರು ಹಾಗೂ ಹಿರಿಯ ಪತ್ರಕರ್ತರಿಗೆ ಅಭಿಮಾನದ ಅಭಿನಂದನ ಕಾರ್ಯಕ್ರಮದಂದು ನವೆಂಬರ್ 11ರಂದು ಬೆಳಗಾವಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನಾನು ಆಡಿದ ಮಾತಿನಿಂದ ಬೆಳಗಾವಿಯ ಪತ್ರಕರ್ತ ಸಹೋದರರಿಗೆ ನೋವಾಗಿದ್ದರೆ ನಾನು ವಿಷಾಧಿಸುತ್ತೇನೆ.

ಅಲ್ಲಿ ನಾನು ಸಕಾರಾತ್ಮಕ ದೃಷ್ಟಿಕೋನದಿಂದ ಮಾತನಾಡಿದ್ದೇನೆಯೇ ಹೊರತು ಬೇರೆ ಯಾವುದೇ ಉದ್ದೇಶದಿಂದಲ್ಲ ಎಂದು ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಪತ್ರಕರ್ತರು ರಾಜಕೀಯಕ್ಕಿಂತ ಅಭಿವೃದ್ಧಿ ವಿಷಯದ ಮೇಲೆ ಹೆಚ್ಚಿನ ಬೆಳಕು ಚೆಲ್ಲಬೇಕು ಎನ್ನುವ ಅರ್ಥದಲ್ಲಿ ನಾನು ಮಾತನಾಡಿದ್ದೇನೆ. ಆ ಕಾರ್ಯಕ್ರಮ ಪತ್ರಕರ್ತರ ಕುಟುಂಬದೊಳಗಿನ ಕಾರ್ಯಕ್ರಮ, ಅಲ್ಲಿ ಸಾರ್ವಜನಿಕರು ಇರಲಿಲ್ಲ. ನಾನು ನಿಮ್ಮೆಲ್ಲರ ಸಹೋದರಿ ಎನ್ನುವ ಭಾವನೆಯಿಂದ ಮಾತನಾಡಿದ್ದೇನೆ.

ಇದರಿಂದ ಪತ್ರಕರ್ತ ಸಹೋದರರ ಮನಸ್ಸಿಗೆ ನೋವುಂಟಾಗಬಾರದಿತ್ತು. ಹಾಗಾಗಿ ಯಾರೂ ಅನ್ಯಥಾ ಭಾವಿಸಬಾರದು ಎಂದು ಕೋರಿದ್ದಾರೆ.

ಯಾರೊಂದಿಗೂ ಜಿದ್ದಿಗೆ ಬಿದ್ದು ರಾಜಕಾರಣ ಮಾಡುವ ಮನೋಭಾವ ನನ್ನದಲ್ಲ. ಬೆಳಗಾವಿ ಪತ್ರಕರ್ತ ಸಹೋದರರೊಂದಿಗೆ ಮೊದಲಿನಿಂದಲೂ ನಾನು ಉತ್ತಮ ಬಾಂಧವ್ಯ ಹೊಂದಿದ್ದೇನೆ. ನನ್ನ ಈವರೆಗಿನ ಬೆಳವಣಿಗೆಯಲ್ಲಿ ಪತ್ರಕರ್ತ ಸಹೋದರರ ಸಹಕಾರ ಬಹಳ ದೊಡ್ಡದಿದೆ. ನಾನು ಯಾವತ್ತೂ ಪತ್ರಕರ್ತ ಸಹೋದರರನ್ನು ಗೌರವಭಾವದಿಂದಲೇ ಕಾಣುತ್ತೇನೆ. ಹಾಗಾಗಿ ಯಾವತ್ತೂ ನಾನು ಪತ್ರಕರ್ತರ ಮನಸ್ಸಿಗೆ ನೋವುಂಟು ಮಾಡುವ ಪ್ರಶ್ನೆಯೇ ಇಲ್ಲ. ಈ ವಿಷಯವನ್ನು ದೀರ್ಘಕ್ಕೆ ಕೊಂಡೊಯ್ಯುವ ಬದಲು ಇಷ್ಟಕ್ಕೇ ಮುಗಿಸೋಣ. ಸಧ್ಯ ನಾನು ಬೆಂಗಳೂರಿನಲ್ಲಿದ್ದೇನೆ. ಮುಂದಿನ ದಿನಗಳಲ್ಲಿ ಎಂದಿನಂತೆ ಪರಸ್ಪರ ಸಹಕಾರದಿಂದ ಜಿಲ್ಲೆಯಲ್ಲಿ, ರಾಜ್ಯದಲ್ಲಿ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಮಾಡೋಣ ಎಂದು ಅವರು ಆಶಿಸಿದ್ದಾರೆ.

## ಸಿಎಸ್ ಆರ್ ಫಂಡಿಂಗ್ ಬಗ್ಗೆ ಯತೀಂದ್ರ ಪ್ರಸ್ತಾಪಿಸಿದ್ದು, ಆರೋಪ ಸಾಬೀತಾದರೆ ರಾಜಕೀಯ ನಿವೃತ್ತಿ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಸಿಎಸ್ ಆರ್ ಫಂಡಿಂಗ್ ಬಗ್ಗೆ ನನ್ನ ಪುತ್ರ ಡಾ ಯತೀಂದ್ರ ಪ್ರಸ್ತಾಪಿಸಿದ್ದು ಎಂದು ಸಿಎಂ ಸಿದ್ದರಾಮಯ್ಯ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯಿಸಿದ್ದಾರೆ.

ಡಾ ಯತೀಂದ್ರ ಸಿದ್ದರಾಮಯ್ಯ ಮೊಬೈಲ್ ನಲ್ಲಿ ಮಾತನಾಡಿರುವ ವಿಡಿಯೊ ಮಾಧ್ಯಮಗಳಲ್ಲಿ ತೀವ್ರ ಸುದ್ದಿಯಾಗಿ ವಿರೋಧ ಪಕ್ಷಗಳು ಟೀಕಿಸುತ್ತಿರುವ ಸಂದರ್ಭದಲ್ಲಿ ಪ್ರತಿಕ್ರಿಯಿಸಿರುವ ಸಿಎಂ ಸಿದ್ದರಾಮಯ್ಯ ಶಾಲೆಗಳನ್ನು ದುರಸ್ತಿ ಮಾಡಲಾಗುತ್ತಿದೆ. ಅದಕ್ಕೆ ಸಿಎಸ್ ಆರ್ ಫಂಡ್ ಒದಗಿಸುವ ಬಗ್ಗೆ ಮಾತನಾಡಿದ್ದಾರೆ ಹೊರತು ವರ್ಗಾವಣೆ ಬಗ್ಗೆ ಅಲ್ಲ ಎಂದು ಸ್ಪಷ್ಟಪಡಿಸಿದರು.

ಐದು ಹೆಸರು ಮಾತ್ರ ಎಂದು ಮೊಬೈಲ್ ನಲ್ಲಿ ಯತೀಂದ್ರ ಹೇಳಿದ್ದರ ಬಗ್ಗೆ ಕೇಳಿದಾಗ ಐದು ಹೆಸರು ಅಂದರೆ ವರ್ಗಾವಣೆ ಮಾಡುವ ಹೆಸರುಗಳೆಂದರ್ಥವೇ, ಇದನ್ನು ಭಾರೀ ದೊಡ್ಡದಾಗಿ ವಿವಾದ ಮಾಡುತ್ತಿದ್ದಾರಷ್ಟೆ ಎಂದರು.

ರಾಜಕೀಯ ನಿವೃತ್ತಿ: ನನ್ನ 40 ವರ್ಷಗಳ ರಾಜಕೀಯ ಜೀವನದಲ್ಲಿ ಯಾವುದೇ ದಂಧೆ, ಹಗರಣಗಳಲ್ಲಿ ಭಾಗಿಯಾಗಿಲ್ಲ. ಕುಮಾರಸ್ವಾಮಿ ರಾಜಕೀಯಕ್ಕಾಗಿ ಏನೆಲ್ಲಾ ಆರೋಪ ಮಾಡಬಹುದು, ಮಾಡಿಕೊಳ್ಳಲಿ, ಕುಮಾರಸ್ವಾಮಿ ಆರೋಪಗಳ ಬಗ್ಗೆ ಬೇಕಾದರೆ ತನಿಖೆ ಮಾಡಿಕೊಳ್ಳಲಿ, ನನ್ನ ರಾಜಕೀಯ ಜೀವನದಲ್ಲಿ ವರ್ಗಾವಣೆ ದಂಧೆ ಮಾಡಿಲ್ಲ. ವರ್ಗಾವಣೆ ದಂಧೆ ಮಾಡಿದ್ದು ಸಾಬೀತಾದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದರು.

ಶ್ಯಾಡೋ ಸಿಎಂ: ವರ್ಗಾವಣೆ ದಂಧೆ ವಿಚಾರದಲ್ಲಿ ಮಾತನಾಡಿರುವ ವಿಡಿಯೊ ಎಂದು ಹೇಳಲಾದ ಸಿಎಂ ಸಿದ್ದರಾಮಯ್ಯ ಪುತ್ರ ಡಾ ಯತೀಂದ್ರ ಮಾತನಾಡಿರುವ ವಿಡಿಯೊ ವ್ಯಾಪಕವಾಗಿ ವೈರಲ್ ಆಗುತ್ತಿದ್ದಂತೆ ಬಿಜೆಪಿ ಟ್ವೀಟ್ ಮೂಲಕ ಸರ್ಕಾರವನ್ನು ಮತ್ತು ಸಿಎಂ ಸಿದ್ದರಾಮಯ್ಯನವರನ್ನು ಟೀಕಿಸಿದೆ.

ಸಿದ್ದರಾಮಯ್ಯನವರು ನಾಮಕಾವಸ್ತೆ ಸಿಎಂ ಅಷ್ಟೆ, ಅವರ ಹೆಸರಿನಲ್ಲಿ ಡಾ ಯತೀಂದ್ರ ಸರ್ಕಾರದ ಆಡಳಿತದಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ. ಸರ್ಕಾರದಲ್ಲಿ ವರ್ಗಾವಣೆ ದಂಧೆ ಮಿತಿಮೀರಿದೆ ಎಂದು ಆರೋಪಿಸಿದೆ.

## ಆಸ್ಪತ್ರೆಗಳು ಯುದ್ಧಭೂಮಿಯಲ್ಲ: ಗಾಜಾ ಆಸ್ಪತ್ರೆ ಮೇಲೆ ಇಸ್ರೇಲ್ ದಾಳಿಗೆ ವಿಶ್ವಸಂಸ್ಥೆ, ರೆಡ್ ಕ್ರಾಸ್ ಆತಂಕ



ಜಿನೆವಾ: ಗಾಜಾದ ಅತಿದೊಡ್ಡ ಆಸ್ಪತ್ರೆ ಮೇಲೆ ಇಸ್ರೇಲ್ ಪಡೆಗಳು ದಾಳಿ ಮಾಡಿದ ನಂತರ ತೀವ್ರ ಕಳವಳ ವ್ಯಕ್ತಪಡಿಸಿದ ವಿಶ್ವಸಂಸ್ಥೆ ಮತ್ತು ರೆಡ್‌ಕ್ರಾಸ್ ಸಂಸ್ಥೆ, ಸಾವಿರಾರು ರೋಗಿಗಳು ಮತ್ತು ನಾಗರಿಕರನ್ನು ರಕ್ಷಿಸಬೇಕು ಎಂದು ಒತ್ತಾಯಿಸಿವೆ.

ಇಸ್ರೇಲಿ ಪಡೆಗಳು ಅಲ್–ಶಿಫಾ ಆಸ್ಪತ್ರೆ ಮೇಲೆ ದಾಳಿ ನಡೆಸಿವೆ. ಈ ಆಸ್ಪತ್ರೆಯ ಕೆಳಗೆ ಸುರಂಗಗಳಲ್ಲಿ ಹಮಾಸ್ ಕಮಾಂಡ್ ಸೆಂಟರ್ ಇದೆ ಎಂದು ನಂಬಿರುವ ಇಸ್ರೇಲ್ ಪಡೆಗಳು ಆಸ್ಪತ್ರೆಯನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿವೆ.

"ಗಾಜಾದ ಅಲ್–ಶಿಫಾ ಆಸ್ಪತ್ರೆ ಮೇಲಿನ ಮಿಲಿಟರಿ ದಾಳಿಯ ವರದಿಗಳಿಂದ ನಾನು ದಿಗ್ಭ್ರಮೆಗೊಂಡಿದ್ದೇನೆ" ಎಂದು ವಿಶ್ವಸಂಸ್ಥೆಯ ಮಾನವೀಯ ಮುಖ್ಯಸ್ಥ ಮಾರ್ಟಿನ್ ಗ್ರಿಫಿತ್ಸ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. "ನವಜಾತ ಶಿಶುಗಳು, ರೋಗಿಗಳು, ವೈದ್ಯಕೀಯ ಸಿಬ್ಬಂದಿ ಮತ್ತು ಎಲ್ಲಾ ನಾಗರಿಕರನ್ನು ರಕ್ಷಿಸಬೇಕು. ಆಸ್ಪತ್ರೆಗಳು ಯುದ್ಧಭೂಮಿಯಲ್ಲ" ಎಂದು ಎಚ್ಚರಿಸಿದ್ದಾರೆ.

## ಹಮಾಸ್ ಗಾಗಿ ಗಾಜಾದ ಮೂಲೆ ಮೂಲೆಯಲ್ಲೂ ಶೋಧ; ಉಗ್ರ ಮುಖಂಡನ ಮನೆಯನ್ನೇ ಬಾಂಬ್ ಇಟ್ಟು ಉಡಾಯಿಸಿದ ಇಸ್ರೇಲ್

ಟೆಲ್ ಅವೀವ್: ಹಮಾಸ್ ಉಗ್ರರ ವಿರುದ್ಧ ಕಾರ್ಯಾಚರಣೆ ತೀವ್ರಗೊಳಿಸಿರುವ ಇಸ್ರೇಲ್ ಸೇನೆ ಗಾಜಾದ ಮೂಲೆ ಮೂಲೆಯಲ್ಲೂ ಉಗ್ರರಿಗಾಗಿ ತೀವ್ರ ಶೋಧ ನಡೆಸುತ್ತಿದ್ದು, ಏತನ್ಮಧ್ಯೆ ಹಮಾಸ್ ಉಗ್ರ ಸಂಘಟನೆಯ ಮುಖಂಡನ ಮನೆಯನ್ನೇ ಇಸ್ರೇಲ್ ವಾಯುಸೇನೆ ಬಾಂಬ್ ಹಾಕಿ ಉಡಾಯಿಸಿದೆ.

ಹೌದು.. ಹಮಾಸ್ ಉಗ್ರ ಸಂಘಟನೆಯ ಪ್ರಮುಖ ಉಗ್ರನೊಬ್ಬನ ಮನೆಯನ್ನೇ ಇಸ್ರೇಲ್ ಬಾಂಬಿಟ್ಟು ಧ್ವಂಸಗೊಳಿಸಿದೆ. ಈ ಸಿನಿಮೀಯ ವಿಡಿಯೊಗಳು ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ. ಹಮಾಸ್ ಪ್ರಮುಖ ಉಗ್ರ, ಹಮಾಸ್ ರಾಜಕೀಯ ವಿಭಾಗದ ಮುಖ್ಯಸ್ಥ ಇಸ್ಮಾಯಿಲ್ ಹನಿಯೇಹ್ ಎಂಬಾತನ ಮನೆಯನ್ನು ಇಸ್ರೇಲ್ ಸೇನೆಯು ಬಾಂಬಿಟ್ಟು



ಧ್ವಂಸಗೊಳಿಸಿದೆ. "ಇಸ್ರೇಲ್ ಫೈಟರ್ ಜೆಟ್‌ಗಳು ಇಸ್ಮಾಯಿಲ್ ಹನಿಯೇಹ್ ಮನೆಯನ್ನು ಧ್ವಂಸಗೊಳಿಸಿವೆ" ಎಂದು ವಿಡಿಯೊಗಳ ಸಮೇತ ಇಸ್ರೇಲ್ ಡಿಫೆನ್ಸ್ ಫೋರ್ಸ್ ಪೋಸ್ಟ್ ಮಾಡಿದೆ.

ಮನೆ ಧ್ವಂಸಗೊಳಿಸಿದ ಬಳಿಕ ಇಸ್ರೇಲ್ ಸೈನಿಕರು ಆ ಮನೆಯನ್ನು ಶೋಧ ಮಾಡಿದ ವಿಡಿಯೊವನ್ನು ಕೂಡ ಹಂಚಿಕೊಳ್ಳಲಾಗಿದೆ.

ಆದರೆ, ಇಸ್ಮಾಯಿಲ್ ಹನಿಯೇಹ್ ಹತ್ಯೆಗೀಡಾಗಿರುವ ಕುರಿತು ಮಾಹಿತಿ ಲಭ್ಯವಾಗಿಲ್ಲ. ಈಗಾಗಲೇ ಹಮಾಸ್ ಉಗ್ರ ಸಂಘಟನೆಯ ಹಲವು ಮುಖಂಡರನ್ನು ಇಸ್ರೇಲ್ ಹತ್ಯೆಗೈದಿದೆ.

**ಉಗ್ರರಿಗಾಗಿ ತೀವ್ರ ಶೋಧ**

ಸಾವಿರಾರು ರಾಕೆಟ್‌ಗಳ ಮೂಲಕ ದಾಳಿ ಮಾಡಿದ ಹಮಾಸ್ ಉಗ್ರರನ್ನು ನಿರ್ನಾಮ ಮಾಡುವ ಪಣತೊಟ್ಟಿರುವ ಇಸ್ರೇಲ್ ಸೇನೆಯು ಗಾಜಾ ನಗರದ ಪ್ರತಿಯೊಂದು ಮೂಲೆಗಳಲ್ಲೂ ಆವರಿಸಿದ್ದಾರೆ. ಸುರಂಗಗಳಲ್ಲಿ ಅಡಗಿದರೂ ಉಗ್ರರನ್ನು ಬಿಡುತ್ತಿಲ್ಲ.

**ಉಗ್ರರ ಪತ್ತೆಗೆ ಬುಲ್ಡೋಜರ್ ಬಳಕೆ**

ಅಲ್–ಶಿಫಾ ಆಸ್ಪತ್ರೆಯ ಕೆಳಗೆ ಹಮಾಸ್ ಉಗ್ರರ ಸುರಂಗವಿದೆ. ಆಸ್ಪತ್ರೆ ಮೂಲಕ ಸುರಂಗದೊಳಗೆ ಹೋಗುವುದು, ಅಲ್ಲಿಂದ ಬರುವುದು, ಆಸ್ಪತ್ರೆಯಲ್ಲಿಯೇ ದಾಳಿಗೆ ಸಂಚು ರೂಪಿಸುವುದು ಸೇರಿ ಹಲವು ಕೃತ್ಯಗಳಲ್ಲಿ ಹಮಾಸ್ ಉಗ್ರರು ತೊಡಗಿದ್ದಾರೆ ಎಂದು ಹೇಳಲಾಗುತ್ತಿದೆ. ಹಾಗಾಗಿ ಬುಲ್ಡೋಜರ್‌ಗಳನ್ನು ಬಳಸಲಾಗುತ್ತಿದೆ ಎಂದು ತಿಳಿದುಬಂದಿದೆ. ಆಸ್ಪತ್ರೆಯಲ್ಲಿ ಉಗ್ರ ಚಟುವಟಿಕೆಗಳನ್ನು ನಿಲ್ಲಿಸಬೇಕು ಎಂದು ಹಮಾಸ್ ಉಗ್ರರಿಗೆ ಇಸ್ರೇಲ್ ಗಡುವು ನೀಡಿತ್ತು. ಆದರೆ, ಹಮಾಸ್ ಉಗ್ರರು ಇದಕ್ಕೆ ಸೊಪ್ಪು ಹಾಕದ ಕಾರಣ ಭೀಕರವಾಗಿ ದಾಳಿ ನಡೆಸಲಾಗುತ್ತಿದೆ. ಆಸ್ಪತ್ರೆಯಲ್ಲಿ ಉಂಟಾಗಿರುವ ಸಾರ್ವಜನಿಕರ ಸಾವು–ನೋವಿನ ಕುರಿತು ಯಾವುದೇ ಮಾಹಿತಿ ಲಭ್ಯವಾಗಿಲ್ಲ.

## ರಾಜ್ಯದಲ್ಲಿ ಪ್ರತೀ ವರ್ಷ ಕ್ಯಾನ್ಸರ್ ಪ್ರಕರಣ ಶೇ.1 ರಷ್ಟು ಹೆಚ್ಚಳ; ಪುರುಷರಿಗಿಂತ ಮಹಿಳೆಯರನ್ನೇ ಹೆಚ್ಚು ಕಾಡುತ್ತಿದೆ ರೋಗ!

ಬೆಂಗಳೂರು: ರಾಜ್ಯದಲ್ಲಿ ಕ್ಯಾನ್ಸರ್ ರೋಗ ಉಲ್ಬಣಿಸುತ್ತಿದೆ, ಪ್ರತಿ ವರ್ಷ ಶೇಕಡಾ 1ರಷ್ಟು ಕ್ಯಾನ್ಸರ್ ಪ್ರಕರಣಗಳು ಹೆಚ್ಚುತ್ತಿದ್ದು, ಪುರುಷರಿಗಿಂತಲೂ ಮಹಿಳೆಯರೇ ರೋಗಕ್ಕೆ ತುತ್ತಾಗುತ್ತಿದ್ದಾರೆಂದು ವರದಿಗಳಿಂದ ತಿಳಿದುಬಂದಿದೆ.

ಮಹಿಳೆಯರಲ್ಲಿ ಹೆಚ್ಚಾಗಿ ಸ್ತನ ಕ್ಯಾನ್ಸರ್ ಪ್ರಕರಣಗಳು ಕಂಡು ಬರುತ್ತಿಗ್ಗುಸ ಗರ್ಭಕಂಠದ ಕ್ಯಾನ್ಸರ್ ಮತ್ತು ಅಂಡಾಶಯದ ಕ್ಯಾನ್ಸರ್‌ಗಳ ಸಂಖ್ಯೆ ಕೂಡ ಹೆಚ್ಚಾಗುತ್ತಿದೆ ಎನ್ನಲಾಗಿದೆ.


ಕಿದ್ವಾಯಿ ಮೆಮೋರಿಯಲ್ ಇನ್‌ಸ್ಟಿಟ್ಯೂಟ್ ಆಫ್ ಆಂಕೊಲಾಜಿಯ (ಕೆಎಂಐಒ) ವೈದ್ಯಕೀಯ ಆಂಕೊಲಾಜಿಸ್ಟ್ ಡಾ.ಸುರೇಶ್ ಬಾಬು ಮಾತನಾಡಿ, "ಈ ಹಿಂದೆ, ಮಹಿಳೆಯರಲ್ಲಿ ಗರ್ಭಕಂಠದ ಕ್ಯಾನ್ಸರ್ ಪ್ರಕರಣಗಳು ಅತಿ ಹೆಚ್ಚು ಕಾಣಿಸಿಕೊಳ್ಳುತ್ತಿದ್ದವು.

ಆದರೆ, ಈಗ ಸುಧಾರಿತ ಸ್ಕ್ರೀನಿಂಗ್‌ನಿಂದಾಗಿ ಗರ್ಭಕಂಠ ಕ್ಯಾನ್ಸರ್‌ಗಳಲ್ಲಿ ಇಳಿಮುಖ ಕಂಡಿದೆ.

ಕಳೆದ ಕೆಲವು ವರ್ಷಗಳಿಂದ ಬದಲಾಗುತ್ತಿರುವ ಜೀವನಶೈಲಿಯಿಂದ ಸ್ತನ ಕ್ಯಾನ್ಸರ್ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬರುತ್ತಿವೆ" ಎಂದು ಹೇಳಿದ್ದಾರೆ.

"ಸ್ತನ ಕ್ಯಾನ್ಸರ್ ತಪಾಸಣೆಯು ನಗರ ಪ್ರದೇಶಗಳಲ್ಲಿ ಸುಧಾರಿಸಿದರೂ, ಗ್ರಾಮೀಣ ಮಹಿಳೆಯರಲ್ಲಿ ಇನ್ನೂ ಜಾಗೃತಿ ಮೂಡಿಸುವ ಅಗತ್ಯವಿದೆ.

ಕರ್ನಾಟಕದ ಗ್ರಾಮೀಣ ಭಾಗಗಳಲ್ಲಿನ ಮಹಿಳೆಯರು ಸ್ತನದಲ್ಲಿ ಉಂಡೆಯಾಕಾರ ಗಡ್ಡೆ ಇದ್ದರೂ ತಪಾಸಣೆ ಮಾಡಿಸಿಕೊಳ್ಳುವುದನ್ನು ತಪ್ಪಿಸುತ್ತಾರೆ. ತಪಾಸಣೆ ಮಾಡುವುದನ್ನು ತಪ್ಪಿಸುವುದರಿಂದ ರೋಗ ಉಲ್ಬಣಗೊಳ್ಳಲು ಕಾರಣವಾಗುತ್ತದೆ" ಎಂದು ತಿಳಿಸಿದ್ದಾರೆ.



"ಸ್ತನ ಕ್ಯಾನ್ಸರ್ ಹೊಂದಿರುವ ಗ್ರಾಮೀಣ ಮಹಿಳೆಯರು ನಿಯಮಿತವಾಗಿ ತಪಾಸಣೆಗೆ ಒಳಪಡುವುದನ್ನು ಮೀರಿ ಅಲ್ಟ್ರಾಸೌಂಡ್ ಮತ್ತು ಮ್ಯಾಮೊಗ್ರಫಿ ಪರೀಕ್ಷೆಗಳಂತಹ ಸೌಲಭ್ಯಗಳನ್ನು ಪಡೆಯಲು ಸಾಧ್ಯವಿಲ್ಲ.

ಏಕೆಂದರೆ, ಈ ಪರೀಕ್ಷೆಗಳು ಮೆಟಾಸ್ಟಾಟಿಕ್ ಹಂತದಲ್ಲಿ ರೋಗನಿರ್ಣಯ ಮಾಡಲು ಆರ್ಥಿಕ ಹೊರೆಯನ್ನು ಹೆಚ್ಚಿಸುತ್ತದೆ" ಎಂದು ವಿವರಿಸಿದ್ದಾರೆ.

"ಮತ್ತೊಂದು ಅಂಶವೆಂದರೆ, ಮಹಿಳೆಯರ ಸ್ತನಗಳಲ್ಲಿ ಉದ್ಭವಾಗಿರುವ ಉಂಡೆಯಾಕಾರದ ಗಡ್ಡೆಗಳು ನೋವುರಹಿತವಾಗಿರುತ್ತವೆ.

ಇದರಿಂದ ಮಹಿಳೆಯರು ಪರೀಕ್ಷೆ ಮಾಡಿಸಲು ಹಿಂದೇಟು ಹಾಕುತ್ತಾರೆ. ಅಕ್ಟೋಬರ್ ಅನ್ನು ಸ್ತನ ಕ್ಯಾನ್ಸರ್ ಜಾಗೃತಿ ತಿಂಗಳಾಗಿ ಆಚರಿಸಲಾಗುತ್ತದೆ ಎಂದು ಹೇಳಿದರು.

ಮಣಿಪಾಲ್ ಆಸ್ಪತ್ರೆಯ ಶಸ್ತ್ರ ಚಿಕಿತ್ಸಾ ಆಂಕಾಲಾಜಿ ಮತ್ತು ರೊಬೊಟಿಕ್ ಸರ್ಜರಿ ವಿಭಾಗದ ಮುಖ್ಯಸ್ಥರು ಮತ್ತು ಸಲಹೆಗಾರರಾದ ಡಾ ಶಬ್ಬರ್ ಜವೇರಿ ಅವರು ಮಾತನಾಡಿ, ಚಿಕ್ಕ ವಯಸ್ಸಿನ ಮಹಿಳೆಯರಲ್ಲಿ ಹೆಚ್ಚು ಸ್ತನ ಕ್ಯಾನ್ಸರ್ ಪ್ರಕರಣಗಳು ಕಂಡುಬರುತ್ತಿವೆ ಎಂದು ತಿಳಿಸಿದರು.

ಹಿಂದೆ, 50–60ರ ವಯಸ್ಸಿನ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ರೋಗ ಕಂಡುಬರುತ್ತಿತ್ತು. ಆದರೆ, ಈಗ 30ರ ಹರೆಯದ ಮಹಿಳೆಯರಲ್ಲಿ ಕೂಡ ರೋಗ ಕಂಡು ಬರುತ್ತಿದೆ.

ಇದಕ್ಕೆ ಜೀವನಶೈಲಿಯಲ್ಲಿನ ಬದಲಾವಣೆಗಳು, ತಡವಾಗಿ ಮದುವೆಯಾಗುವುದು, ಕಡಿಮೆ ಹಾಲುಣಿಸುವ ಅವಧಿ ಅಥವಾ ಕೆಲಸ–ಸಂಬಂಧಿತ ಒತ್ತಡವು ಕಾರಣವೆಂದು ಹೇಳಲಾಗುತ್ತದೆ" ಎಂದು ತಿಳಿಸಿದರು.

ಕೆಎಮ್‌ಐಒ ಸೆಪ್ಟೆಂಬರ್ 2023 ರಲ್ಲಿ ಬಿಡುಗಡೆ ಮಾಡಿದ ವರದಿಯು, "ರಾಜ್ಯದಲ್ಲಿ 87,000 ಹೊಸ ಕ್ಯಾನ್ಸರ್ ಪ್ರಕರಣಗಳನ್ನು ಅಂದಾಜಿಸಲಾಗಿದೆ.

ಭಾರತದಲ್ಲಿ 37.5 ಲಕ್ಷಕ್ಕೂ ಹೆಚ್ಚು ಪ್ರಕರಣಗಳಿದ್ದು, ಅದರಲ್ಲಿ 2.3 ಲಕ್ಷ ಪ್ರಕರಣಗಳು ಕರ್ನಾಟಕದಿಂದ ಬಂದಿವೆ.

ಬೆಂಗಳೂರಿನಲ್ಲಿ ಶ್ವಾಸಕೋಶ, ಹೊಟ್ಟೆ, ಪ್ರಾಸ್ಟೇಟ್ ಮತ್ತು ಅನ್ನನಾಳದ ಕ್ಯಾನ್ಸರ್‌ಗಳು ಪುರುಷರಲ್ಲಿ ಪ್ರಧಾನವಾಗಿರುತ್ತವೆ.

ಮಹಿಳೆಯರಲ್ಲಿ ಸ್ತನ, ಗರ್ಭಕಂಠ, ಅಂಡಾಶಯ ಮತ್ತು ಕಾರ್ಪಸ್ ಗರ್ಭಾಶಯಗಳು ಪ್ರಮುಖ ಕ್ಯಾನ್ಸರ್‌ಗಳಾಗಿವೆ" ಎಂದು ಹೇಳಿದೆ.

ಬಾಲ್ಯದ ಕ್ಯಾನ್ಸರ್ (0–14 ವರ್ಷಗಳು) ಪ್ರಕರಣ ಸಂಖ್ಯೆ ಕೂಡ ಉಲ್ಬಣಗೊಳ್ಳುತ್ತಿರುವುದು ಕೂಡ ಇತ್ತೀಚಿನ ದಿನಗಳಲ್ಲಿ ಕಂಡು ಬರುತ್ತಿವೆ.

ಲ್ಯುಕೇಮಿಯಾ ಮತ್ತು ಲಿಂಫೋಮಾ ರೋಗಗಳು ಕೂಡ ಉಲ್ಬಣಗೊಳ್ಳುತ್ತಿವೆ.

# ತೆರಿಗೆ ವಂಚನೆ ಆರೋಪ: ಡ್ರೈಫ್ರೂಟ್ಸ್ ಮಳಿಗೆ, ಫುಡ್ ಇಂಡಸ್ಟ್ರಿ ಮೇಲೆ ಐಟಿ ದಾಳಿ




ಬೆಂಗಳೂರು: ತೆರಿಗೆ ವಂಚನೆ ಮಾಡಿದ ಆರೋಪದ ಮೇಲೆ ಬೆಂಗಳೂರಿನ ಫುಡ್ ಇಂಡಸ್ಟ್ರಿ ಮತ್ತು ಆಹಾರ ಉತ್ಪಾದನಾ ಘಟಕಗಳ ಮೇಲೆ ಆದಾಯ ತೆರಿಗೆ ಇಲಾಖೆ ದಾಳಿ ನಡೆಸಿದೆ. ರಾಜಾಜಿನಗರ, ಬಿವಿಕೆ ಅಯ್ಯಂಗಾರ್ ರಸ್ತೆಯಲ್ಲಿ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಡ್ರೈ ಫ್ರೂಟ್ಸ್ ವ್ಯಾಪಾರಿಗಳ ಅಂಗಡಿ ಹಾಗೂ ಮನೆಗಳ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿ ದಾಖಲೆ ಪರಿಶೀಲನೆ ಮಾಡುತ್ತಿದ್ದಾರೆ. ಇತ್ತೀಚಿಗೆ ಗುತ್ತಿಗೆದಾರರು, ಜ್ಯುವೆಲ್ಲರಿ ಮಾಲೀಕರ ಮನೆ ಹಾಗೂ ಕಚೇರಿಗಳ ಮೇಲೆ ಐಟಿ ದಾಳಿ ನಡೆಸಿತ್ತು. ಇದೀಗ ಫುಡ್ ಇಂಡಸ್ಟ್ರಿ ಮೇಲೆ ದಾಳಿ ನಡೆಸಲಾಗಿದೆ. ಡ್ರೈಫ್ರೂಟ್ಸ್ ಕಾರ್ಖಾನೆ ಹಾಗೂ ಸ್ಟೋರ್‌ಗಳ ಮೇಲೆ ಐಟಿ ದಾಳಿ ನಡೆಸಿದ್ದು, ಇಂದು ನಗರದ ಎರಡು ಕಡೆ ದಾಳಿ ಮಾಡಿದೆ.

ಹತ್ತಕ್ಕೂ ಹೆಚ್ಚು ವಾಹನಗಳಲ್ಲಿ ಬಂದ ಐಟಿ ಅಧಿಕಾರಿಗಳು ರಾಜಾಜಿನಗರ ಇಂಡಸ್ಟ್ರಿಯಲ್ ಎಸ್ಟೇಟ್ ಹಾಗೂ ಬಿವಿಕೆ ಅಯ್ಯಂಗಾರ್ ರಸ್ತೆ ಬಳಿ ದಾಳಿ ನಡೆಸಿದ್ದಾರೆ. ಪಿಎಸ್ ಆಗ್ರೋ ಫುಡ್ ಎಲ್‌ಎಲ್‌ಪಿ ಕಾರ್ಖಾನೆ ಹಾಗೂ ಮಾಣಕ್ ಮೇವಾ ಡ್ರೈಫ್ರೂಟ್ಸ್ ಸ್ಟೋರ್ ಮೇಲೆ ದಾಳಿ ನಡೆಸಿದ್ದು, ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ.

# ನೀರನ್ನು ಉಳಿಸುವ ಮತ್ತು ಹಿತಮಿತವಾಗಿ ಬಳಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ: ರಾಜ್ಯಸಭಾ ಸಂಸದ ಈರಣ್ಣ ಕಡಾಡಿ

ಬೆಳಗಾವಿ: ನೀರು ಭಗವಂತ ಕೊಟ್ಟ ಪ್ರಸಾದ ಅದನ್ನು ಸರಿಯಾಗಿ ಬಳಕೆ ಮಾಡುವ ಮುಖಾಂತರ ನೀರನ್ನು ಉಳಿಸುವ ಮತ್ತು ಹಿತಮಿತವಾಗಿ ಬಳಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಗುರುವಾರ ನ–16 ರಂದು ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಬೆಳಗಾವಿ ನಗರದ ವಾರ್ಡ ನಂ–4 ನರಗುಂದಕರ ಭಾವೆ ಚೌಕ್ ದತ್ತಾತ್ರೇಯ ಮಂದಿರ ಹತ್ತಿರ ಬೊರವೆಲ್ (ಕೊಳವೆ ಬಾವಿ) ಕೊರೆಯುವ ಕಾರ್ಯಕ್ಕೆ ಪೂಜೆ ಸಲ್ಲಿಸಿ, ಚಾಲನೆ ನೀಡಿ ಮಾತನಾಡಿದರು.

ಇತ್ತೀಚಿಗೆ ದೇಶದಲ್ಲಿ ಮಳೆಯ ಪ್ರಮಾಣ ಬಹಳ ಕುಸಿತವಾಗಿದ್ದು ಅಂತರ್ಜಲ ಮಟ್ಟ ದಿನ ದಿನಕ್ಕೆ ಕಡಿಮೆಯಾಗುತ್ತಿದೆ. ಮುಂದಿನ ದಿನಗಳಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ದೃಷ್ಟಿಯಿಂದ ನಾವೆಲ್ಲರೂ ಇಂಗು ಗುಂಡಿ ನಿರ್ಮಿಸುವುದು, ಗಿಡಮರ ಬೆಳೆಸುವುದು, ಅರಣ್ಯ ಪ್ರದೇಶ ಹೆಚ್ಚು ಮಾಡುವುದು ಸೇರಿದಂತೆ ಹೀಗೆ ಹಲವಾರು ಚಟುವಟಿಕೆಗಳನ್ನು ಮಾಡಬೇಕಾಗಿದೆ. ಹೀಗಾಗಿ ಬೆಳಗಾವಿ ಮಹಾನಗರ ದೊಡ್ಡ ಪ್ರಮಾಣದಲ್ಲಿ ಬೆಳೆದಿದ್ದು, ನಗರದ ಅಲ್ಲಲ್ಲಿ ನೀರಿನ ಸಮಸ್ಯೆ ಇದ್ದು ಬೋರ್ವೆಲ್ ಕೊರೆಸಿ ನೀರಿನ ಸಮಸ್ಯೆ ಬಗೆಹರಿಸಲು ಪ್ರಯತ್ನಿಸಲಾಗಿದೆ ಎಂದು ಹೇಳಿದರು




ಈ ಸಂದರ್ಭದಲ್ಲಿ ಮಾಜಿ ಶಾಸಕರು ಹಾಗೂ ಬೆಳಗಾವಿ ಮಹಾನಗರ ಜಿಲ್ಲಾಧ್ಯಕ್ಷ ಅನೀಲ ಬೆನಕೆ, ನಗರ ಸೇವಕರಾದ ಜಯತೀರ್ಥ ಸವದತ್ತಿ, ರಾಜಶೇಖರ ಡೋಣಿ, ಬಾಬುಲಾಲ ಪುರೋಹಿತ, ವಿಕ್ರಮ ಪುರೋಹಿತ, ಶಿಲ್ಪಾ ಕೆಕರೆ, ವಿಜಯ ಭದ್ರಾ, ಮಹಾನಗರ ಜಿಲ್ಲಾ ಮಾಧ್ಯಮ ಸಂಚಾಲಕ ಶರದ ಪಾಟೀಲ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

ಧಾರವಾಡ: ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚವರಾದ ಸಂತೋಷ ಲಾಡ್ ಅವರು ನ.17, 18 ಮತ್ತು 19 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಉಸ್ತುವಾರಿ ಸಚಿವರು ನ.17 ರಂದು ಬೆಳಿಗ್ಗೆ 6–30 ಕ್ಕೆ ಧಾರವಾಡಕ್ಕೆ ಆಗಮಿಸಿ ಕಲಘಟಗಿಗೆ ಪ್ರಯಾಣ ಬೆಳೆಸುವರು. ಬೆಳಿಗ್ಗೆ 10 ಗಂಟೆಗೆ ಕಲಘಟಗಿಯಲ್ಲಿ ಆಯೋಜಿಸಿರುವ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗವಹಿಸಿ ನಂತರ ಕ್ಷೇತ್ರ ಪ್ರವಾಸ ಕೈಗೊಳ್ಳುವರು. ನ.18 ರಂದು ಬೆಳಿಗ್ಗೆ 10 ಗಂಟೆಗೆ ಬೆಣಚಿ ಗ್ರಾಮಪಂಚಾಯತ್, ಮಧ್ಯಾಹ್ನ 12 ಗಂಟೆಗೆ ಕಡಬಗಟ್ಟಿ ಮತ್ತು ಸಂಜೆ 4 ಗಂಟೆಗೆ ಅರವಟಗಿ ಗ್ರಾಮಪಂಚಾಯಿತಿಗಳಿಗೆ ಭೇಟಿ ನೀಡಿ ಸಾರ್ವಜನಿಕರ ಕುಂದು ಕೊರತೆ ಆಲಿಸುವರು. ನ.19 ರಂದು ಬೆಳಿಗ್ಗೆ 10 ಗಂಟೆಗೆ ಹುಬ್ಬಳ್ಳಿಗೆ ಆಗಮಿಸಿ ದಾಜಿಬಾನ್ ಪೇಟೆಯ ತಳಜಾಭವಾನಿ ದೇವಸ್ಥಾನದಲ್ಲಿ ಆಯೋಜಿಸಿರುವ ಶ್ರೀ ರಾಜರಾಜೇಶ್ವರಿ, ಶ್ರೀ ಸಹಸ್ರಾರ್ಜುನ ಮಹಾರಾಜರ ಜಯಂತಿ ಉತ್ಸವದ ಮೆರವಣಿಗೆಯನ್ನು ಉದ್ಘಾಟಿಸುವರು. ಮಧ್ಯಾಹ್ನ 12–30 ಕ್ಕೆ ಕಲಘಟಗಿ ತಾಲೂಕಿನ ದೇವಿಕೊಪ್ಪ ಗ್ರಾಮಪಂಚಾಯಿತಿಗೆ ಭೇಟಿ ನೀಡಿ ಸಾರ್ವಜನಿಕರ ಕುಂದು ಕೊರತೆಗಳನ್ನು ವಿಚಾರಿಸುವರು. ನಂತರ ರಾತ್ರಿ 8 ಗಂಟೆಗೆ ಉಡುಪಿ ಜಿಲ್ಲೆಯ ಕುಂದಾಪುರಕ್ಕೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸ್ ಡಿಕ್ಕಿ; ಮಹಿಳೆ ಸಾವು



ಆನೇಕಲ್: ಟಿವಿಎಸ್ ಎಕ್ಸೆಲ್ ಬೈಕ್‌ಗೆ ಖಾಸಗಿ ಬಸ್ ಡಿಕ್ಕಿಯಾದ ಪರಿಣಾಮ ಮಹಿಳೆ ದಾರುಣವಾಗಿ ಸಾವನ್ನಪ್ಪಿದ ಘಟನೆ ಬೆಂಗಳೂರು–ಬನ್ನೇರುಘಟ್ಟ ಮುಖ್ಯರಸ್ತೆಯ ಮೀನಾಕ್ಷಿ ದೇವಾಲಯದ ಬಳಿ ನಡೆದಿದೆ.

ಹುಳಿಮಾವು ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಪಘಾತ ಸಂಭವಿಸಿದ್ದು, ಘಟನೆಯಲ್ಲಿ ಶ್ಯಾನಭೋಗನಹಳ್ಳಿ ನಿವಾಸಿ ಸೆಲ್ವಿ (48) ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪತಿ ಜೊತೆ ಬೈಕ್‌ನಲ್ಲಿ ಹೋಗುತ್ತಿದ್ದ ಸಂದರ್ಭ ಅವಘಡ ಸಂಭವಿಸಿದೆ. ಸೆಲ್ವಿ ಪತಿ ಮಾರತಹಳ್ಳಿಯಲ್ಲಿ ಸೆಕ್ಯೂರಿಟಿ ಕೆಲಸ ಮಾಡುತ್ತಿದ್ದರು. ಮಗಳನ್ನು ಸಹಾ ಮಾರತಹಳ್ಳಿಗೆ ಮದುವೆ ಮಾಡಿಕೊಡಲಾಗಿತ್ತು.

ಮಾರತಹಳ್ಳಿಯ ಮಗಳ ಮನೆಗೆಂದು ಪತಿ ಜೊತೆ ಹೊರಟಿದ್ದ ಸಂದರ್ಭ ಅತಿವೇಗವಾಗಿ ಬಂದ ಖಾಸಗಿ ಬಸ್ ಟಿವಿಎಸ್ ಎಕ್ಸೆಲ್ ಬೈಕ್‌ಗೆ ಹಿಂಬದಿಯಿಂದ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ರಸ್ತೆಯಲ್ಲಿ ಬಿದ್ದ ಮಹಿಳೆ ಮೇಲೆ ಬಸ್ ಹರಿದಿದ್ದು, ಸ್ಥಳದಲ್ಲೇ ಮಹಿಳೆ ದಾರುಣವಾಗಿ ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಹುಳಿಮಾವು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ರವಾನೆ ಮಾಡಿ ಘಟನೆ ಸಂಬಂಧ ಪ್ರಕರಣ ದಾಖಲಿಸಲಾಗಿದೆ.

# ಎಂಜಿ.ರಸ್ತೆಯಲ್ಲಿ ವಿದೇಶಿ ಪ್ರವಾಸಿಗನ ಮೊಬೈಲ್ ಕಸಿದ ಕಳ್ಳರು, ದೂರು ದಾಖಲು



ಬೆಂಗಳೂರು: ನಗರದ ಎಂಜಿ ರಸ್ತೆಯಲ್ಲಿ ಬೈಕ್‌ನಲ್ಲಿ ಬಂದ ಇಬ್ಬರು ಅಪರಿಚಿತ ದರೋಡೆಕೋರರು ಆಸ್ಟ್ರೇಲಿಯಾದ ಪ್ರವಾಸಿಗರೊಬ್ಬರ ಮೊಬೈಲ್ ದೋಚಿ ಪರಾರಿಯಾಗಿರುವ ಘಟನೆ ಸೋಮವಾರ ನಡೆದಿದೆ.

ಆಸ್ಟ್ರೇಲಿಯಾದ ಮಿಚೆಲ್ ಆರ್ಥರ್ ತಮ್ಮ ಜರ್ಮನ್ ಸ್ನೇಹಿತನೊಂದಿಗೆ ಹಂಪಿಗೆ ಭೇಟಿ ನೀಡುವ ಸಲುವಾಗಿ ರಾಜ್ಯಕ್ಕೆ ಭೇಟಿ ನೀಡಿದ್ದರು. ವಿಮಾನ ಬೆಂಗಳೂರಿಗೆ ಬಂದಿಳಿದಿದ್ದ ಕಾರಣ, ಬೆಂಗಳೂರಿನಲ್ಲಿಯೇ ತಂಗಿದ್ದರು.

ಸೋಮವಾರ ಸಂಜೆ 4.40–4.45ರ ಸುಮಾರಿಗೆ ಎಂಜಿ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಮಿಚೆಲ್ ಆರ್ಥರ್ ನಡೆದು ಹೋಗುತ್ತಿದ್ದರು. ಈ ವೇಳೆ ಇತರೆ ದಾರಿಹೋಕರ ಬಳಿಕ ಮಾರ್ಗದ ಕುರಿತು ವಿಚಾರಿಸುತ್ತಿದ್ದಾಗ ಬೈಕ್ ನಲ್ಲಿ ಬಂದಿರುವ ಇಬ್ಬರು ದುಷ್ಕರ್ಮಿಗಳು ಮಿಚೆಲ್ ಅವರ ಮೊಬೈಲ್ ಕಸಿದು ಪರಾರಿಯಾಗಿದ್ದಾರೆ. ಈ ಸಂಬಂಧ ಕಬ್ಬನ್ ಪಾರ್ಕ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಕಳ್ಳರಿಗಾಗಿ ಹುಡುಕಾಟ ಆರಂಭಿಸಿದ್ದಾರೆ.

# ಯತೀಂದ್ರ ಅವರು ವರ್ಗಾವಣೆ, ಲಂಚ ಅಂತ ಎಲ್ಲಿ ಮಾತನಾಡಿದ್ದಾರೆ, ಬಿಜೆಪಿ–ಜೆಡಿಎಸ್ ನವರಿಗೆ ಬೇರೆ ಕೆಲಸ ಇಲ್ಲ: ಡಿ ಕೆ ಶಿವಕುಮಾರ್

ಬೆಂಗಳೂರು: ಸಿಎಂ ಸಿದ್ದರಾಮಯ್ಯನವರ ಪುತ್ರ ಡಾ ಯತೀಂದ್ರ ಸಿದ್ದರಾಮಯ್ಯ ಮೊಬೈಲ್ ನಲ್ಲಿ ಮಾತನಾಡಿರುವ ಲಿಸ್ಟ್ ವಿಡಿಯೊ ವ್ಯಾಪಕವಾಗಿ ವೈರಲ್ ಆಗಿ ವಿವಾದವಾಗುತ್ತಿದ್ದಂತೆ ಡಿಸಿಎಂ ಡಿ ಕೆ ಶಿವಕುಮಾರ್ ಯತೀಂದ್ರ ಪರ ಬ್ಯಾಟ್ ಬೀಸಿದ್ದಾರೆ.

ಕುಮಾರಸ್ವಾಮಿ ಅವರು ಯತೀಂದ್ರ ಕುರಿತು ಹಂಚಿಕೊಂಡಿರುವ ವಿಡಿಯೋದಲ್ಲಿ ಎಲ್ಲಾದರೂ ವರ್ಗಾವಣೆ ಅಂತ ಪದ ಇದೆಯಾ? ಲಂಚದ ಬಗ್ಗೆ ಎಲ್ಲಿ ಮಾತನಾಡಿದ್ದಾರೆ? ಸುಮ್ಮನೇ ಪ್ರಚಾರ ಮಾಡಿ ನಮ್ಮ ಹುಡುಗನನ್ನು ಲೀಡರ್ ಮಾಡುತ್ತಿದ್ದಾರೆ. ಮಾಡಲಿ ಬಿಡಿ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದರು.

ಬೆಂಗಳೂರಿನಲ್ಲಿ ಇಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಯತೀಂದ್ರ ಎಲ್ಲಿ ವರ್ಗಾವಣೆ ಬಗ್ಗೆ ಮಾತಾಡಿದ್ದಾರೆ ಹೇಳಿ? ವಿಡಿಯೋ ನಾನು ನೋಡಿದ್ದೇನೆ. ಒಬ್ಬ ಮಾಜಿ ಶಾಸಕ ನಾಲ್ಕೈದು ಅಧಿಕಾರಿಗಳ ವರ್ಗಾವಣೆ ಕೇಳಿದರೆ ಏನ್ ತಪ್ಪು? ನನ್ನ ಕ್ಷೇತ್ರದಲ್ಲಿ ನನ್ನ ಸಹೋದರ ಕೆಲವು ಕೆಲಸ ಅಟೆಂಡ್ ಮಾಡುತ್ತಾರೆ. ಜನ ಮನೆ, ಹಸು ಕುರಿ ಬೇಕಾಂತಾರೆ. ಅದನ್ನು ಸುರೇಶ್ ಅಟೆಂಡ್ ಮಾಡುತ್ತಾರೆ. ನಾನು ನಂತರ ಸಹಿ ಹಾಕುತ್ತೇನೆ. ನಾನು ಬಗುರ್ ಹುಕುಂ ಸಮಿತಿ ಅಧ್ಯಕ್ಷ ಆಗಿದ್ದೇನೆ. ಎಲ್ಲಾ ನೋಡೋದಕ್ಕೆ ಆಗಲ್ಲ ಎಂದರು.



ಯತೀಂದ್ರ ಸಿದ್ದರಾಮಯ್ಯ ಅವರು ಸಿಎಂಗೆ ದಾರಿ ತಪ್ಪಿಸುತ್ತಿದ್ದಾರೆ ಅನ್ನೋ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ಮುಖ್ಯಮಂತ್ರಿ ಅವರಿಗೆ 40 ವರ್ಷಗಳ ರಾಜಕೀಯ ಅನುಭವ ಇದೆ. ಯಾರು ದಾರಿ ತಪ್ಪಿಸಲು ಆಗಲ್ಲ ಎಂದರು. ಬಿಜೆಪಿ ಮತ್ತು ಜೆಡಿಎಸ್‌ನವರಿಗೆ ಪಾಪ ಏನೂ ಕೆಲಸ ಇಲ್ಲ. ಯತೀಂದ್ರ ಅವರು ಕೆಡಿಪಿ ಸದಸ್ಯರಿದ್ದಾರೆ. ಆಶ್ರಯ ಸಮಿತಿ ಅಧ್ಯಕ್ಷರಾಗಿದ್ದಾರೆ. ಜನ ಸಂಪರ್ಕ ಸಭೆ ನಡೆಸುತ್ತಿದ್ದಾರೆ. ಈ ಸಂದರ್ಭದಲ್ಲಿ ಕೆಲವು ಶಾಲೆಗಳಿಗೆ ಮೂಲಸೌಲಭ್ಯ ಕಲ್ಪಿಸುವ ವಿಚಾರವಾಗಿ ಯತೀಂದ್ರ ಮಾತನಾಡಿದ್ದಾರೆ ಎಂದರು.

ಮಹದೇವ ಎನ್ನುವ ಅಧಿಕಾರಿ ಮೇಲೆ ಸ್ಥಳೀಯರು ಆರೋಪ ಮಾಡಿದ್ದಾರೆ. ಆಶ್ರಯ ಕಮಿಟಿ ಅಧ್ಯಕ್ಷರಿಗೆ, ಬೇರೊಬ್ಬ ಎಂಎಲ್‌ಎಗಳಿಗೆ ಈ ರೀತಿ ಅಧಿಕಾರ ಇರುತ್ತದೆ.

ಇದು ಕುಮಾರಸ್ವಾಮಿಗೆ ಅರ್ಥ ಆಗುವುದಿಲ್ಲವಾ. ಕುಮಾರಸ್ವಾಮಿ ಅವರು ಹತಾಶರಾಗಿದ್ದಾರೆ. ಕುಮಾರಸ್ವಾಮಿ ಅವರಿಗೆ ದಂಧೆ, ಹಗರಣದ ಅನುಭವವಿದೆ. ಅದಕ್ಕೆ ಹಾಗೆ ಟ್ವೀಟ್ ಮಾಡಿದ್ದಾರೆ. ಮಾಡಲಿ ಬಿಡಿ ಎಂದರು.

ಶ್ಯಾಡೋ ಸಿಎಂ: ವರ್ಗಾವಣೆ ದಂಧೆ ವಿಚಾರದಲ್ಲಿ ಮಾತನಾಡಿರುವ ವಿಡಿಯೊ ಎಂದು ಹೇಳಲಾದ ಸಿಎಂ ಸಿದ್ದರಾಮಯ್ಯ ಪುತ್ರ ಡಾ ಯತೀಂದ್ರ ಮಾತನಾಡಿರುವ ವಿಡಿಯೊ ವ್ಯಾಪಕವಾಗಿ ವೈರಲ್ ಆಗುತ್ತಿದ್ದಂತೆ ಬಿಜೆಪಿ ಟ್ವೀಟ್ ಮೂಲಕ ಸರ್ಕಾರವನ್ನು ಮತ್ತು ಸಿಎಂ ಸಿದ್ದರಾಮಯ್ಯನವರನ್ನು ಟೀಕಿಸಿದೆ.

ಸಿದ್ದರಾಮಯ್ಯನವರು ನಾಮಕಾವಸ್ತೆ ಸಿಎಂ ಅಷ್ಟೆ, ಅವರ ಹೆಸರಿನಲ್ಲಿ ಡಾ ಯತೀಂದ್ರ ಸರ್ಕಾರದ ಆಡಳಿತದಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ. ಸರ್ಕಾರದಲ್ಲಿ ವರ್ಗಾವಣೆ ದಂಧೆ ಮಿತಿಮೀರಿದೆ ಎಂದು ಆರೋಪಿಸಿದೆ.

# ಎಲ್ಲಾ ಜಮೀನುಗಳನ್ನು ಮರು ಸಮೀಕ್ಷೆ: ಸಚಿವ ಕೃಷ್ಣ ಬೈರೇಗೌಡ

ರಾಮನಗರ: ಭೂ ಸರ್ವೆ ವಿಚಾರದಲ್ಲಿ ಸಾಕಷ್ಟು ಸಮಸ್ಯೆಗಳಿವೆ. ಇದರಿಂದಾಗಿ, ರೈತರು ತಮ್ಮದಲ್ಲದ ತಪ್ಪಿಗೆ ಸಾಕಷ್ಟು ನೋವನ್ನು ಅನುಭವಿಸಿದ್ದಾರೆ. ಹೀಗಾಗಿ ರೈತರ ಎಲ್ಲಾ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡುವ ಸಲುವಾಗಿ ಶತಮಾನಗಳ ನಂತರ ಭೂ ಮರು ಸರ್ವೆ ಪ್ರಾಯೋಗಿಕ ಪರೀಕ್ಷೆಗೆ ಇಂದು ಚಾಲನೆ ನೀಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಬುಧವಾರ ಕನಕಪುರ ತಾಲೂಕಿನ ಉಯ್ಯಂಬಳ್ಳಿ ಹೋಬಳಿಯಲ್ಲಿ ಭೂ ಮರು ಮಾಪನ (ರೀ ಸರ್ವೆ) ಪ್ರಾಯೋಗಿಕ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ 1920ರ ನಂತರ ಸರ್ವೇ ನಡೆದಿಲ್ಲ. ಪ್ರತಿ ಹಳ್ಳಿಯ ಹಿಡುವಳಿ ಭೂಮಿ, ಗೋಮಾಳ, ಹುಲ್ ಬನ್ನಿ, ಸರ್ಕಾರಿ ಖರಾಬು, ಇನಾಮು ಮತ್ತು ಕೆರೆ ಭೂಮಿಗಳಿಗೆ ಸಂಬಂಧಿಸಿದಂತೆ ಈಗ ಸರ್ಕಾರದ ಬಳಿ ಇರುವುದು ನೂರು ವರ್ಷಗಳ ಹಳೆಯ ಬ್ರಿಟೀಷರ ಕಾಲದಲ್ಲಿ ನಡೆದ ಸರ್ವೇ ದಾಖಲೆಯೇ ಆಗಿದೆ. ಆದರೆ, ಈ ನೂರು ವರ್ಷದಲ್ಲಿ ಕೃಷಿ ಮತ್ತು ಜನವಸತಿ ಪ್ರದೇಶಗಳಲ್ಲಿ ಸಾಕಷ್ಟು ಬದಲಾವಣೆಯಾಗಿವೆ.



ಪ್ರತಿಯೊಂದು ಗ್ರಾಮಠಾಣಾ ಗಡಿ ಹಾಗೂ ಸರ್ವೇ ನಂಬರ್ ಗಡಿಯಲ್ಲೂ ವ್ಯತ್ಯಾಸಗಳಾಗಿವೆ. ಆದರೆ, ಈ ಬಗ್ಗೆ ಸರ್ಕಾರಿ ದಾಖಲೆಗಳಲ್ಲಿ ನಿಖರ ವಿವರಣೆ ಇಲ್ಲ.

ಪರಿಣಾಮ ರೈತರು ತಮ್ಮದಲ್ಲದ ತಪ್ಪಿಗೆ ಸಾಕಷ್ಟು ಸಮಸ್ಯೆಗೆ ಒಳಗಾಗುತ್ತಿದ್ದಾರೆ. "ಸರ್ವೇ ನಂಬರ್ ಡಿಸ್ಪ್ಯೂಟ್" ಎಂಬುದು ರೈತರ ಪಾಲಿಗೆ ಸಾಮಾನ್ಯ ಸಮಸ್ಯೆ ಎಂಬಂತಾಗಿದೆ. ಸರ್ಕಾರಿ ಜಮೀನನ್ನು ಗುರುತಿಸಿ ರಕ್ಷಿಸುವುದೂ ದೊಡ್ಡ ಸವಾಲಾಗಿದೆ.

ಹೀಗಾಗಿ ಈ ಎಲ್ಲಾ ಸಮಸ್ಯೆಗೆ ಇತಿಶ್ರೀ ಹಾಡುವ ಸಲುವಾಗಿ ಇಂದು ಕನಕಪುರ ತಾಲೂಕು ಉಯ್ಯಂಬಳ್ಳಿ ಹೋಬಳಿಯಲ್ಲಿ ಡ್ರೋನ್ ಚಾಲಿತ ಭೂ ಮರು ಮಾಪನಕ್ಕೆ (ರೀ ಸರ್ವೇ) ಚಾಲನೆ ನೀಡಲಾಯಿತು ಎಂದು ಹೇಳಿದರು.

ಹೊಸ ತಂತ್ರಜ್ಞಾನದಲ್ಲಿ ಡ್ರೋಣ್ ಪ್ರತಿ ಚ.ಕಿಲೊಮೀಟರ್ ಗೆ 4000 ಕ್ಕೂ ಅಧಿಕ ಫೋಟೊ ತೆಗೆಯುತ್ತದೆ.

ಈ ಫೋಟೊಗಳ ಆಧಾರದಲ್ಲಿ ವೈಜ್ಞಾನಿಕವಾಗಿ ಹಿಡುವಳಿ ಭೂಮಿ, ಗೋಮಾಳ, ಹುಲ್ ಬನ್ನಿ, ಸರ್ಕಾರಿ ಖರಾಬು, ಇನಾಮು ಮತ್ತು ಕೆರೆ ಭೂಮಿಗಳನ್ನು ಗುರುತಿಸಲಾಗುವುದು. ಈ ಮೂಲಕ ರೈತರ ಸರ್ವೇ ಡಿಸ್ಪ್ಯೂಟ್ ಗಳಿಗೆ ಶಾಶ್ವತ ಪರಿಹಾರ ಹಾಗೂ ಸರ್ಕಾರಿ ಭೂಮಿ ಗುರುತಿಸಿ ಒತ್ತುವರಿ ತೆರವು ಮಾಡಲು ಸಹಕಾರಿಯಾಗುವುದು. ಈ ಪ್ರಾಯೋಗಿಕ ರೀ ಸರ್ವೇ ಯಶಸ್ವಿಯಾದರೆ ರಾಜ್ಯಾದ್ಯಂತ ಎಲ್ಲಾ ಕೃಷಿ ಜಮೀನುಗಳನ್ನೂ ಡ್ರೋಣ್ ಮೂಲಕ ರೀ ಸರ್ವೇ ಮಾಡುವ ಚಿಂತನೆ ಇದೆ ಎಂದು ತಿಳಿಸಿದರು.

# ನ.17 ರಂದು ಕಲಘಟಗಿಯಲ್ಲಿ ರಾಜ್ಯಮಟ್ಟದ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ

ಧಾರವಾಡ: ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ಸೌಹಾರ್ದ ಸಂಯುಕ್ತ ಸಹಕಾರಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಮತ್ತು ಕರ್ನಾಟಕ ರಾಜ್ಯ ತೋಟಗಾರಿಕಾ ಮಹಾಮಂಡಳ ಹಾಗೂ ಕರ್ನಾಟಕ ಸೆಂಟ್ರಲ್ ಕೋ ಅಪರೇಟಿವ್ ಬ್ಯಾಂಕ್, ಧಾರವಾಡ ಮತ್ತು ವಿವಿಧ ಸಹಕಾರ ಸಂಘ, ಹಾಲು ಒಕ್ಕೂಟಗಳ ಆಶ್ರಯದಲ್ಲಿ ಕಲಘಟಗಿ ಪಟ್ಟಣದ ಹನ್ನೆರಡೆತ್ತಿನ ಮಠದ ಹತ್ತಿರ ಆಯೋಜಿಸಿರುವ ವೇದಿಕೆಯಲ್ಲಿ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವು ನಾಳೆ ನ.17 ರಂದು ಬೆಳಿಗ್ಗೆ 10 ಗಂಟೆಗೆ ಜರುಗಲಿದೆ. 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಸಾಧನೆಯಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಮತ್ತು ಸುಸ್ಥಿರ ಅಭಿವೃದ್ಧಿ ಗುರಿಗಳು ಧ್ಯೇಯವಾಕ್ಯದೊಂದಿಗೆ ಆಯೋಜಿಸಿರುವ ಈ ಸಪ್ತಾಹ ಕಾರ್ಯಕ್ರಮದಲ್ಲಿ ಕೇಂದ್ರ ಸಂಸದೀಯ ವ್ಯವಹಾರಗಳ, ಗಣಿ ಮತ್ತು ಕಲ್ಲಿದ್ದಲು ಸಚಿವರಾದ ಪ್ರಲ್ಹಾದ ಜೋಶಿ ಅವರು ಘನಉಪಸ್ಥಿತರಿದ್ದು, ವಸ್ತು ಪ್ರದರ್ಶನ ಮಳಿಗೆಯನ್ನು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸುವರು. ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರು ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಕಾರ್ಮಿಕ ಇಲಾಖೆಯ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಸಚಿವರಾದ ಹೆಚ್. ಕೆ. ಪಾಟೀಲ ಅವರು ಸಹಕಾರ ಧ್ವಜಾರೋಹಣ ನೆರವೇರಿಸುವರು. ಕೃಷಿ ಮಾರುಕಟ್ಟೆ ಸಕ್ಕರೆ ಮತ್ತು ಜವಳಿ ಇಲಾಖೆ ಸಚಿವ ಶಿವಾನಂದ ಪಾಟೀಲ, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಜಗದೀಶ ಶೆಟ್ಟರ್ ಸೇರಿದಂತೆ ಧಾರವಾಡ, ಹಾವೇರಿ, ಗದಗ, ಉತ್ತರ ಕನ್ನಡ ಜಿಲ್ಲೆಗಳ ಶಾಸಕರು, ವಿಧಾನ ಪರಿಷತ್ ಸದಸ್ಯರು, ವಿವಿಧ ಜನಪ್ರತಿನಿಧಿಗಳು, ಸಹಕಾರ ಇಲಾಖೆಯ ಹಿರಿಯ ಅಧಿಕಾರಿಗಳು ಸೇರಿದಂತೆ ಸಹಕಾರ ಸಂಘಗಳ ಪ್ರತಿನಿಧಿಗಳು, ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# 110 ಕೆವಿ. ಅಳ್ನಾವರ ವಿದ್ಯುತ್ ವಿತರಣಾ ಕೇಂದ್ರ : ವಿದ್ಯುತ್ ವ್ಯತ್ಯಯ

ಧಾರವಾಡ: 110 ಕೆವಿ. ಅಳ್ನಾವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನವೆಂಬರ್ 18 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇವರು 3 ನೇ ತ್ರೈಮಾಸಿಕ ತುರ್ತುಪಾಲನಾ ಕಾಮಗಾರಿಯನ್ನು ಕೈಗೊಳ್ಳಲಿದ್ದಾರೆ. ಅಳ್ನಾವರ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ ಎಲ್ಲಾ 11 ಕೆವಿ ಮಾರ್ಗಗಳಲ್ಲಿ ನ.18 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 06 ಅಳ್ನಾವರ ಪಟ್ಟಣ, ಬೆಣಚಿ, ಡೋರಿ, ಸುರೆಬೈಲ್, ಗೋಪನಟ್ಟಿ, ಹುಳ್ಳಿಗೇರಿ, ಕಡಬಗಟ್ಟಿ, ಇಂಡಸಗೇರಿ, ಅವರಬತ್ ಬೈಲ್, ಜೊಡಳ್ಳಿ, ದುಂಡಳ್ಳಿ, ಒದಗೆರಾ, ತಾವರಗೇರಿ, ಬಾಳಗುಂದ, ಚುಂಚವಾಡ, ಲಿಂಗನಮಠ, ಹೊಸಲಿಂಗನಮಠ ಮತ್ತು ಪಾಲಗೆರಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸುತ್ತುಮುತ್ತಲಿನ ಗ್ರಾಮಗಳ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

# ಪ.ಜಾ. ಪತ್ರಿಕೋದ್ಯಮ ವಿದ್ಯಾರ್ಥಿಗಳಿಂದ ಅಪ್ರೆಂಟಿಸ್ಶಿಪ್ ತರಬೇತಿಗೆ ಅರ್ಜಿ ಆಹ್ವಾನ

ಶಿವಮೊಗ್ಗ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2023–24ನೇ ಸಾಲಿನ ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆಯಡಿ ಜಿಲ್ಲಾ ಕಚೇರಿಯಲ್ಲಿ ಕ್ಷೇತ್ರ ಪ್ರಚಾರ ಕಾರ್ಯಕ್ರಮ ಹಾಗೂ ಮಾಧ್ಯಮ ಚಟುವಟಿಕೆಗಳ ನಿರ್ವಹಣೆ ಕುರಿತು ತರಬೇತಿ ಪಡೆಯಲಿಚ್ಚಿಸುವ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ತರಬೇತಿ ಪಡೆಯಲಿಚ್ಚಿಸುವ ಅಭ್ಯರ್ಥಿಯು ಪತ್ರಿಕೋದ್ಯಮ ಹಾಗೂ ಮಾಧ್ಯಮ ಕ್ಷೇತ್ರದ ವಿಷಯದಲ್ಲಿ ಪದವಿ/ಸ್ನಾತಕೋತ್ತರ ಪದವಿ ಪಡೆದವರಾಗಿರಬೇಕು. ಕನ್ನಡ, ಇಂಗ್ಲೀಷ್ ಭಾಷೆಯ ಓದು ಮತ್ತು ಬರಹ ಬಲ್ಲವರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿದವರಾಗಿರಬೇಕು. ಜನವರಿ–2024 ರಿಂದ ಡಿಸೆಂಬರ್–2024ರವರೆಗಿನ 12 ತಿಂಗಳ ತರಬೇತಿ ಇದಾಗಿದ್ದು, ಪರಿಶಿಷ್ಟ ಜಾತಿಯ ಇಬ್ಬರು ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕವಾಗಿ 15,000/–ರೂ.ಗಳ ಶಿಷ್ಯವೇತನ ನೀಡಲಾಗುವುದು. ಅಭ್ಯರ್ಥಿಗಳು ಶಿವಮೊಗ್ಗ ಜಿಲ್ಲೆಯವರಾಗಿರಬೇಕು. ಶಿವಮೊಗ್ಗ ಜಿಲ್ಲೆಯ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ನೆರೆಯ ಜಿಲ್ಲೆಯ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು. ಈ ಹಿಂದೆ ಅರ್ಜಿ ಸಲ್ಲಿಸಿ, ಆಯ್ಕೆಯಾಗಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಅವಕಾಶವಿರುವುದಿಲ್ಲ.

ಅರ್ಹರು ತಮ್ಮ ಸ್ವವಿವರ ಹಾಗೂ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಯನ್ನು ದಿ:27/11/2023 ರೊಳಗಾಗಿ ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸರ್.ಎಂ.ವಿ.ರಸ್ತೆ, ಶಿವಮೊಗ್ಗ–577201 ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಇಲಾಖೆಯ ಮಿಂಚೆಂಚೆ: varthabhavansmg1@gmail.com ನ್ನು ಸಂಪರ್ಕಿಸಿ.

# ನೋಂದಾಯಿತ ಸಂಘಸಂಸ್ಥೆಗಳಿಗೆ ಧನಸಹಾಯ ನೀಡಲು ಅರ್ಜಿ ಆಹ್ವಾನ

ಶಿವಮೊಗ್ಗ: ರಾಜ್ಯಾದ್ಯಂತ ಹಾಗೂ ಹೊರ ರಾಜ್ಯಗಳಲ್ಲಿ ಕ್ರಿಯಾತ್ಮಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯ ನಿರ್ವಹಿಸುತ್ತಿರುವ ನೊಂದಾಯಿತ ಸಂಘ–ಸಂಸ್ಥೆಗಳನ್ನು ಪ್ರೋತ್ಸಾಹಿಸಲು 2023–24 ನೇ ಸಾಲಿನ ಸಾಮಾನ್ಯ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ಧನಸಹಾಯ ನೀಡಲು ಸೇವಾಸಿಂಧು ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಸಂಘ ಸಂಸ್ಥೆಗಳು ಅರ್ಜಿಯನ್ನು Sevasindhu.karnataka.gov.in ಮುಖಾಂತರ ದಿ: 14–11–2023 ರಿಂದ 13–12–2023 ರವರೆಗೆ ಸಲ್ಲಿಸಬಹುದು. ಸರ್ಕಾರದ ಆದೇಶ ಸಂಖ್ಯೆ ಕಸಂವಾ 154: ಕಸಧ 2022 ದಿ: 23–06–2023 ಹಾಗೂ ತಿದ್ದುಪಡಿ ಆದೇಶ ದಿನಾಂಕ: 02–01–2023 ರಲ್ಲಿನ ಮಾರ್ಗಸೂಚಿಯನ್ನು ಸೇವಾಸಿಂಧು ಪೋರ್ಟಲ್ ಹಾಗೂ ಇಲಾಖೆಯ ವೆಬ್ಸೈಟ್ www.kannadasiri_karnataka.gov.in ನಲ್ಲಿ ಅಳವಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 08022279954/9986837037/8792662814/8792662816/08022213530 ನ್ನು ಹಾಗೂ ಆಯಾ ಜಿಲ್ಲೆಯ ವ್ಯವಸ್ಥಾಪಕರು, ಸೇವಾ ಸಿಂಧು ಇವರನ್ನು ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಜಿ ಸೈನಿಕನಿಗೆ ಗುಂಡಿಕ್ಕಿ ಹತ್ಯೆ

## ಇಬ್ಬರು ಶಸ್ತ್ರಸಜ್ಜಿತ ದಾಳಿಕೋರರನ್ನು ಹೊಡೆದು ಕೊಂದ ಜನ

ಪಾಟ್ನಾ: ಬಿಹಾರದ ರೋಹ್ತಾಸ್ ಜಿಲ್ಲೆಯಲ್ಲಿ ಮಾಜಿ ಸೈನಿಕನಿಗೆ ಗುಂಡಿಕ್ಕಿ ಹತ್ಯೆಗೈದು ಪರಾರಿಯಾಗಲು ಯತ್ನಿಸುತ್ತಿದ್ದ ಇಬ್ಬರು ವ್ಯಕ್ತಿಗಳನ್ನು ಜನರ ಗುಂಪೊಂದು ಹೊಡೆದು ಕೊಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೂರನೇ ಆಪಾದಿತ ದಾಳಿಕೋರನನ್ನು ಸಹ ತೀವ್ರವಾಗಿ ಥಳಿಸಲಾಗಿದೆ. ಸದ್ಯ ಆತ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಆತನ ಸ್ಥಿತಿ ಸ್ಥಿರವಾಗಿದೆ ಎಂದು ವರದಿಯಾಗಿದೆ.

ಮೃತರನ್ನು ಮಾಜಿ ಸೈನಿಕ ಬಿಜೇಂದ್ರ ಸಿಂಗ್ (55) ಎಂದು ಗುರುತಿಸಲಾಗಿದೆ. ಜನರ ಗುಂಪಿನಿಂದ ಹತ್ಯೆಗೀಡಾದ ಇಬ್ಬರನ್ನು ಮಿಥಿಲೇಶ್ ಕುಮಾರ್ (23) ಮತ್ತು ಆದಿತ್ಯ ಕುಮಾರ್ (25) ಎಂದು ಗುರುತಿಸಲಾಗಿದೆ. ಮೂರನೇ ದಾಳಿಕೋರನನ್ನು ಅಜಿತ್ ಕುಮಾರ್ ಎಂದು ಗುರುತಿಸಲಾಗಿದೆ.



ಪೊಲೀಸ್ ವರಿಷ್ಠಾಧಿಕಾರಿ ವಿನೀತ್ ಕುಮಾರ್ ಮಾತನಾಡಿ, 'ಬೆಳಿಗ್ಗೆ 9.45ರ ಸುಮಾರಿಗೆ ಕಲ್ಯಾಣಿ ಗ್ರಾಮದ ಬಳಿ ಘಟನೆ ನಡೆದಿದ್ದು, ಮೂವರು ಬೈಕ್‌ನಲ್ಲಿ ಬಂದ ಶಸ್ತ್ರಸಜ್ಜಿತ ದುಷ್ಕರ್ಮಿಗಳು ನಿವೃತ್ತ ಸೇನಾ ಯೋಧ ಬಿಜೇಂದ್ರ ಸಿಂಗ್ ಅವರನ್ನು ಗುಂಡಿಕ್ಕಿ ಹತ್ಯೆಗೈದು ಪರಾರಿಯಾಗುತ್ತಿದ್ದರು' ಎಂದಿದ್ದಾರೆ.

ಈ ವೇಳೆ ಸ್ಥಳೀಯ ನಿವಾಸಿಗಳು ಮೂವರು ದಾಳಿಕೋರರನ್ನು ಹಿಂಬಾಲಿಸಿ, ಅವರಿಗೆ ಥಳಿಸಿದ್ದಾರೆ. ಈ ವೇಳೆ ಗ್ರಾಮದ ಅಂಕಿತ್ ಕುಮಾರ್ ಎಂಬುವವರ ಮೇಲೆ ಗುಂಡು ಹಾರಿಸಲಾಗಿದ್ದು, ಅವರು ಗಾಯಗೊಂಡಿದ್ದಾರೆ. ಮಾಹಿತಿ ಪಡೆದ ತಕ್ಷಣ ಪೊಲೀಸರು ಸ್ಥಳಕ್ಕೆ ತಲುಪಿದ್ದಾರೆ ಎಂದು ತಿಳಿಸಿದರು.

ಬಿಜೇಂದ್ರ ಸಿಂಗ್ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ. ಮಾಜಿ ಸೈನಿಕನ ಹತ್ಯೆಯ ಹಿಂದಿನ ಕಾರಣ ಇನ್ನೂ ಪತ್ತೆಯಾಗಿಲ್ಲ. ಹತ್ಯೆಯ ಹಿಂದಿನ ಕಾರಣ ತಿಳಿಯಲು ಮತ್ತು ಗುಂಪು ಹತ್ಯೆ ಬಗ್ಗೆ ತನಿಖೆಗೆ ವಿಶೇಷ ತಂಡವನ್ನು ರಚಿಸಲಾಗಿದೆ ಎಂದು ಎಸ್ಪಿ ತಿಳಿಸಿದ್ದಾರೆ.

# ಚಲಿಸುತ್ತಿದ್ದ ಬಸ್‌ಗೆ ಹಾರಿ ವ್ಯಕ್ತಿ ಆತ್ಮಹತ್ಯೆ

ಚಾಮರಾಜನಗರ: ಚಲಿಸುತ್ತಿದ್ದ ಬಸ್ಗೆ ವ್ಯಕ್ತಿಯೋರ್ವ ಹಾರಿ ಆತ್ಮಹತ್ಯೆ ಮಾಡಿಕೊಂಡ ಆಘಾತಕಾರಿ ಘಟನೆ ಚಾಮರಾಜನಗರದ ಕೆಎಸ್‌ಆರ್ಟಿಸಿ ಬಸ್ ನಿಲ್ದಾಣದ ಮುಂಭಾಗ ನಡೆದಿದೆ.

ಚಾಮರಾಜನಗರ ತಾಲೂಕಿನ ಯಾಲಕ್ಕೂರು ಗ್ರಾಮದ ರಂಗಸ್ವಾಮಿ (34) ಮೃತ ವ್ಯಕ್ತಿ ಎಂದು ತಿಳಿದುಬಂದಿದೆ. ಚಾಮರಾಜನಗರ ಬಸ್ ನಿಲ್ದಾಣದಿಂದ ಮೈಸೂರಿನತ್ತ ತೆರಳುತ್ತಿದ್ದಾಗ ರಸ್ತೆ ಬದಿ ನಿಂತಿದ್ದ ರಂಗಸ್ವಾಮಿ ಹಿಂಬದಿ ಚಕ್ರಕ್ಕೆ ಹಾರಿದ್ದಾನೆ. ಚಾಲಕ ಗಮನಿಸಿ ಬ್ರೇಕ್ ಹಾಕಿದರಾದರೂ ಈತನ ಮೇಲೆ ಗಾಲಿ ಹತ್ತಿದ್ದರಿಂದ ಸ್ಥಳದಲ್ಲೇ ಅಸುನೀಗಿದ್ದಾನೆ.

ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಈ ಘಟನೆಯನ್ನು ಕಂಡ ಸಾರ್ವಜನಿಕರು ಕ್ಷಣ ಕಾಲ ವಿಚಲಿತರಾಗಿದ್ದಾರೆ. ಮಾಹಿತಿ ಅರಿತ ಚಾಮರಾಜನಗರ ಟ್ರಾಫಿಕ್ ಠಾಣೆ ಪೊಲೀಸರು ಶವವನ್ನು ಮರಣೋತ್ತರ ಪರೀಕ್ಷೆಗಾಗಿ ರವಾನಿಸಿದ್ದು, ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ. ಇನ್ನು ಆತ್ಮಹತ್ಯೆ ದೃಶ್ಯ ಅಂಗಡಿಯೊಂದರ ಮುಂಭಾಗ ಅಳವಡಿಸಿದ್ದ ಸಿಸಿಟಿವಿಯಲ್ಲಿ ಸೆರೆಯಾಗಿದೆ.

# ಆಸ್ತಿಗಾಗಿ ಪತ್ನಿ ಕೊಲೆಗೈದ ಪತಿ

ಮಂಡ್ಯ: ಪತ್ನಿ ಮಲಗಿದ್ದ ವೇಳೆ ಮುಖಕ್ಕೆ ದಿಂಬು ಇಟ್ಟು, ಬೆಡ್ ಶೀಟ್‌ನಿಂದ ಉಸಿರುಗಟ್ಟಿಸಿ ಕೊಲೆ ಮಾಡಿದ ಘಟನೆ ಮಂಡ್ಯದ ವಿ.ವಿ. ನಗರ ಬಡಾವಣೆಯಲ್ಲಿ ನಡೆದಿದೆ. ಎಸ್.ಶೃತಿ(32) ಕೊಲೆಯಾದ ಗೃಹಿಣಿ. ಟಿ.ಎನ್.ಸೋಮಶೇಖರ್(41) ಎಂಬಾತನೇ ಕೊಲೆ ಮಾಡಿದ ಪತಿರಾಯ.

ದಿಂಬು ಮತ್ತು ಬೆಡ್ ಶೀಟ್‌ನಿಂದ ಉಸಿರುಗಟ್ಟಿಸಿ ಕೊಲೆ ಮಾಡಿದ ಗಂಡ ಇದೊಂದು ಸಹಜ ಸಾವೆಂದು ಬಿಂಬಿಸಲು ಸಾಕಷ್ಟು ಪ್ರಯತ್ನಪಟ್ಟಿದ್ದ. ಆದರೆ ಆತನ ಹಿನ್ನೆಲೆ, ಆತ ನೀಡುತ್ತಿದ್ದ ಕಿರುಕುಳಗಳ ಹಿನ್ನೆಲೆಯಲ್ಲಿ ಆತನ ವಿಚಾರಣೆ ನಡೆಸಿದಾಗ ಸತ್ಯ ಹೊರಬಿದ್ದಿದೆ.



ಶ್ರುತಿಯ ಹೆಸರಿನಲ್ಲಿ ಕೋಟ್ಯಂತರ ರೂ. ಮೌಲ್ಯದ ಆಸ್ತಿ ಇದೆ ಎನ್ನಲಾಗಿದೆ. ಅದರಲ್ಲಿ ಒಂದು ಭಾಗವನ್ನು ಮಾರಾಟ ಮಾಡಲು ಶ್ರುತಿ ಮುಂದಾಗಿದ್ದರು. ಆದರೆ, ಪತಿ ಸೋಮಶೇಖರ್ ಇದನ್ನು ವಿರೋಧಿಸಿದ್ದ. ಹಾಗಂತ ಅವನು ಒಳ್ಳೆಯ ಕಾರಣಕ್ಕಾಗಿ ಹೀಗೆ ಮಾಡಿದ್ದಲ್ಲ. ಅವನಿಗೆ ಇದ್ದದ್ದು ಎಲ್ಲ ಆಸ್ತಿಯನ್ನು ತನ್ನದಾಗಿಸಿಕೊಳ್ಳುವ ಉದ್ದೇಶ ಎನ್ನಲಾಗಿದೆ. ಇದೀಗ ಪತ್ನಿಯನ್ನು ಕೊಂದಾದರೂ ಸರಿ ಭೂಮಿ ಮತ್ತು ಆಸ್ತಿಯನ್ನು ಕಬಳಿಸಲು ಮುಂದಾಗಿದ್ದಾನೆ.

ಸೋಮಶೇಖರ್ ಆಸ್ತಿ ವಿಚಾರದಲ್ಲಿ ಜಗಳ ಮಾಡುವುದು ಹೊಸತೇನಲ್ಲ. ಹಲವು ಬಾರಿ ರಾಜೀ ಪಂಚಾಯಿತಿ ನಡೆಸಿದ್ದರು ಕಿರುಕುಳ ಮುಂದುವರಿಸಿದ್ದ. ಹೀಗಾಗಿ ಆತನ ಮೇಲೆ ಎಲ್ಲರಿಗೂ ಸಂಶಯವಿತ್ತು. ಶ್ರುತಿ ಸಾವನ್ನಪ್ಪಿದ ಬಳಿಕ ಸಂಬಂಧಿಯೊಬ್ಬರು ಪತಿಯ ಮೇಲೆ ದೂರು ನೀಡಿದ್ದರು. ಯಾವ ಕಾರಣಕ್ಕೂ ಸತ್ಯವನ್ನು ಒಪ್ಪಿಕೊಳ್ಳಲು ನಿರಾಕರಿಸಿದ ಆರೋಪಿ ಕೊನೆಗೆ ಪೊಲೀಸ್ ಟ್ರೀಟ್‌ಮೆಂಟ್‌ಗೆ ಹೆದರಿ ಉಸಿರುಗಟ್ಟಿಸಿ ಕೊಂದಿರುವುದಾಗಿ ಒಪ್ಪಿದ್ದಾನೆ. ಮಂಡ್ಯದ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ದಾಂಪತ್ಯ ಜೀವನಕ್ಕೆ ಕಾಲಿಟ್ಟ ವಾಸುಕಿ ವೈಭವ್



ಬೆಂಗಳೂರು: ಕನ್ನಡದ ಗಾಯಕ ವಾಸುಕಿ ವೈಭವ್ ಮದುವೆ ಮಾಡಿಕೊಂಡಿದ್ದಾರೆ. ಗಾಯಕ ಹಾಗೂ ಸಂಗೀತ ನಿರ್ದೇಶಕರಾದ ಇವರನ್ನು ಮದುವೆಯಾಗಲು ಹಲವು ಜನರು ಮುಂದೆ ಬಂದಿದ್ದರೂ ಸಹ ಇವರು ಆಯ್ಕೆ ಮಾಡಿಕೊಂಡ ಹುಡುಗಿ ಮಾತ್ರ ಅವರ ಬಹುಕಾಲದ ಗೆಳತಿಯನ್ನೇ.

ಬೃಂದಾ ರಂಗಭೂಮಿ ಕಲಾವಿದೆಯಾಗಿದ್ದಾರೆ. ವಾಸುಕಿ ವೈಭವ್ ಇವರಿಗೆ ಬಹುಕಾಲದಿಂದ ಗೆಳೆಯರಾಗಿದ್ದರು ಎಂಬ ವಿಷಯ ತಿಳಿದು ಬಂದಿದೆ. ಇವರ ಇನಸ್ಟಾಗ್ರಾಮ್ ಖಾತೆಯಲ್ಲೂ ಸಹ ವಾಸುಕಿ ಜೊತೆಗಿನ ಹಲವು ಫೋಟೋಗಳಿದೆ.

ಬಿಗ್ಬಾಸ್ ಸೀಸನ್ 7 ಮೂಲಕ ಹೆಚ್ಚು ಜನಪ್ರಿಯರಾದ ವಾಸುಕಿ ಇದೀಗ ಅವರು ತಮ್ಮ ಬಹುಕಾಲದ ಗೆಳತಿ ಬೃಂದಾ ವಿಕ್ರಮ್ ಅವರ ಜೊತೆಗೆ ಮದುವೆ ಮಾಡಿಕೊಂಡಿದ್ದಾರೆ. ಹಲವಾರು ಜನರಿಗೆ ಒಂದು ಕುತೂಹಲವಿತ್ತು ವಾಸುಕಿ ಅವರ ಮಡದಿ ಯಾರಾಗಬಹುದು ಎಂದು. ಅದಕ್ಕೆ ಉತ್ತರ ಈಗ ಸಿಕ್ಕಂತಾಗಿದೆ.

ವಾಸುಕಿ ಕೂಡ ತಮ್ಮ ಸೋಶಿಯಲ್ ಮೀಡಿಯಾಗಳಲ್ಲಿ ಬೃಂದಾ ವರೊಟ್ಟಿಗಿನ ಫೋಟೋ ಶೇರ್ ಮಾಡಿಕೊಂಡಿದ್ದಾರೆ. ಅವರ ಮದುವೆ ಫೋಟೋ ಕೂಡ ವೈರಲ್ ಆಗ್ತಾ ಇದೆ.

ನಿನ್ನೆ ತಾನೆ ಅವರ ಎಂಗೇಜ್ಮೆಂಟ್ ಫೋಟೋಗಳು ವೈರಲ್ ಆಗಿದ್ದು, ಅವರ ಮದುವೆ ಫೋಟೋಸ್ ಸಿಕ್ಕಿದೆ. ಹಾಗಾಗಿ ಎಲ್ಲವೂ ಒಟ್ಟೊಟ್ಟಿಗೆ ಆಗಿದೆ ಎಂದು ಹೇಳಬಹುದು. ಅವರ ದಾಂಪತ್ಯ ಜೀವನಕ್ಕೆ ಅಭಿಮಾನಿಗಳು ಶುಭ ಕೋರಿದ್ದಾರೆ.

# ವಿಶ್ವಕಪ್ ಇತಿಹಾಸದಲ್ಲಿ ಹೊಸ ಮೈಲುಗಲ್ಲು ಸ್ಥಾಪಿಸಿದ ಶಮಿ

ಮುಂಬೈ: ಏಕದಿನ ವಿಶ್ವಕಪ್ ಟೂರ್ನಿಯ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಮೊಹಮ್ಮದ್ ಶಮಿ 50 ವಿಕೆಟ್ ಪಡೆದ ಭಾರತದ ಮೊದಲ ಬೌಲರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಶಮಿ 32.2 ಓವರ್‌ನಲ್ಲಿ ಕೇನ್ ವಿಲಿಯಮ್ಸನ್ ಅವರನ್ನು ಔಟ್ ಮಾಡುವ ಮೂಲಕ ಈ ಮಹತ್ವದ ಮೈಲುಗಲ್ಲು ಸ್ಥಾಪಿಸಿದರು.

ಕೇವಲ 17 ಇನ್ನಿಂಗ್ಸ್‌ಗಳಲ್ಲೇ ಶಮಿ ಈ ಸಾಧನೆ ಮಾಡಿರುವುದು ವಿಶೇಷ. ಆಸ್ಟ್ರೇಲಿಯಾದ ಮಿಚೆಲ್ ಸ್ಟಾರ್ಕ್ 19 ಇನ್ನಿಂಗ್ಸ್‌ಗಲ್ಲಿ 50 ವಿಕೆಟ್ ಪಡೆದ ಸಾಧನೆ ಮಾಡಿದ್ದರು.

ಅದಕ್ಕಿಂತಲೂ ಮುಖ್ಯವಾಗಿ 48 ವರ್ಷಗಳ ವಿಶ್ವಕಪ್ ಇತಿಹಾಸದಲ್ಲಿ ಅತಿಹೆಚ್ಚು ಬಾರಿ 5 ವಿಕೆಟ್ ಪಡೆದ ಸಾಧನೆ ಮಾಡಿದ್ದಾರೆ. ಆಸ್ಟ್ರೇಲಿಯಾದ ಮಿಚೆಲ್ ಸ್ಟಾರ್ಕ್ 3 ಬಾರಿ ಈ ಸಾಧನೆ ಮಾಡಿ 2ನೇ ಸ್ಥಾನದಲ್ಲಿದ್ದಾರೆ. ಶ್ರೀಲಂಕಾ ವಿರುದ್ಧದ ಪಂದ್ಯದಲ್ಲಿ ಶಮಿ 18 ರನ್ ಬಿಟ್ಟುಕೊಟ್ಟು 5 ವಿಕೆಟ್ ಪಡೆದಿದ್ದರು.

ಇದಕ್ಕೂ ಮುನ್ನ ಧರ್ಮಶಾಲಾ ಕ್ರೀಡಾಂಗಣದಲ್ಲಿ ನ್ಯೂಜಿಲೆಂಡ್ ವಿರುದ್ಧದ ಪಂದ್ಯದಲ್ಲಿ 54 ರನ್ ಕೊಟ್ಟು 5 ವಿಕೆಟ್ ಕಿತ್ತಿದ್ದರು. ಇಂದು ಕಿವೀಸ್ ವಿರುದ್ಧ 5 ವಿಕೆಟ್ ಕಿತ್ತು ಮತ್ತೊಂದು ವಿಶೇಷ ಸಾಧನೆ ಮಾಡಿದ್ದಾರೆ. ದಕ್ಷಿಣ ಆಫ್ರಿಕಾ ವಿರುದ್ಧ ರವೀಂದ್ರ ಜಡೇಜಾ 33 ರನ್ ಬಿಟ್ಟುಕೊಟ್ಟು, ಶಾಹೀನ್ ಶಾ ಅಫ್ರಿದಿ ಆಸ್ಟ್ರೇಲಿಯಾ



ವಿರುದ್ಧ 54 ರನ್ ಬಿಟ್ಟುಕೊಟ್ಟು 5 ವಿಕೆಟ್ ಪಡೆದಿದ್ದು ಇದೇ ಟೂರ್ನಿಯಲ್ಲಿ ಎಂಬಿದನ್ನು ಮರೆಯುವಂತಿಲ್ಲ.

ಈ ಸಾಧನೆಯೊಂದಿಗೆ ಮೊಹಮ್ಮದ್ ಶಮಿ ವಿಶ್ವಕಪ್ ಪಂದ್ಯಾವಳಿಗಳಲ್ಲಿ 50 ಅಥವಾ ಅದಕ್ಕಿಂತ ಹೆಚ್ಚು ವಿಕೆಟ್ ಪಡೆದ ಬೌಲರ್ಸ್‌ಗಳ ಎಲೈಟ್ ಪಟ್ಟಿ ಸೇರಿದ್ದು, ಟಾಪ್–10 ಪಟ್ಟಿಯಲ್ಲಿ 6ನೇ ಸ್ಥಾನ ಗಿಟ್ಟಿಸಿಕೊಂಡಿದ್ದಾರೆ. ಗ್ಲೇನ್ ಮೆಕ್‌ಗ್ರಾತ್ 71 ವಿಕೆಟ್, ಮುತ್ತಯ್ಯ ಮುರಳೀಧರನ್ 68 ವಿಕೆಟ್, ಮಿಚೆಲ್ ಸ್ಟಾರ್ಕ್ 59 ವಿಕೆಟ್, ಲಸಿತ್ ಮಾಲಿಂಗ 56 ವಿಕೆಟ್, ವಾಸಿಂ ಅಕ್ರಮ್ 55 ವಿಕೆಟ್ ಪಡೆದಿದು ಕ್ರಮವಾಗಿ ಮೊದಲ 5 ಸ್ಥಾನಗಳಲ್ಲಿದ್ದರೆ 54 ವಿಕೆಟ್ ಪಡೆದ ಶಮಿ ವಿಶ್ವದ ಟಾಪ್ ಬೌಲರ್‌ಗಳ ಪಟ್ಟಿಯಲ್ಲಿ 6ನೇ ಸ್ಥಾನದಲ್ಲಿದ್ದಾರೆ. ಕೇವಲ 17 ಪಂದ್ಯ 17 ಇನ್ನಿಂಗ್ಸ್‌ಗಳಲ್ಲೇ ಶಮಿ ಈ ಸಾಧನೆ ಮಾಡಿರುವುದು ವಿಶೇಷ.

# ಫೆ. 17 ರೊಳಗೆ ಎಲ್ಲಾ ವಾಹನಗಳಿಗೂ ಹೈ–ಸೆಕ್ಯೂರಿಟಿ ನಂಬರ್ ಪ್ಲೇಟ್ ಕಡ್ಡಾಯ

ದಾವಣಗೆರೆ: 2019ರ ಏಪ್ರಿಲ್ 1ಕ್ಕಿಂತ ಮೊದಲು ನೊಂದಾಯಿಸಲಾದ ಎಲ್ಲಾ ವಾಹನಗಳು 2024 ಫೆಬ್ರವರಿ 17ರ ಒಳಗಾಗಿ ಹೈ–ಸೆಕ್ಯೂರಿಟಿ ನಂಬರ್ ಪ್ಲೇಟ್ಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ತಿಳಿಸಿದರು.

ಬುಧವಾರ ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ನಡೆದ ಹೆಚ್.ಎಸ್.ಆರ್ಪಿ ನಂಬರ್ ಪ್ಲೇಟ್ ಅಳವಡಿಸುವ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 6,16,353 ಖಾಸಗಿ ಹಾಗೂ ಸರ್ಕಾರಿ ವಾಹನಗಳಿಗೆ ಹೆಚ್.ಎಸ್.ಆರ್ಪಿ ನಂಬರ್ ಪ್ಲೇಟ್ ಅಳವಡಿಸಬೇಕಾಗಿದೆ. ಇದರಿಂದ ಅಪರಾಧಿಗಳು ಕಾನೂನುಬಾಹಿರ ಚಟುವಟಿಕೆಗಳಿಗೆ ಬಳಸುವ ನಕಲಿ ನೋಂದಣಿ ಸಂಖ್ಯೆಗಳನ್ನು ತಡೆಗಟ್ಟಬಹುದು ಮತ್ತು ಸಂಚಾರ ನಿಯಮಗಳನ್ನು ಉಲ್ಲಂಘಿಸಿದ ವಾಹನಗಳನ್ನು ಟ್ರ್ಯಕ್




ಮಾಡಬಹುದಾಗಿದೆ ಎಂದರು.

2019ರ ಏಪ್ರಿಲ್ ಕ್ಕಿಂತ ಮೊದಲು ನೋಂದಣಿ ಮಾಡಿಸಿಕೊಂಡ ದ್ವಿಚಕ್ರ ವಾಹನ, ತ್ರಿಚಕ್ರ ವಾಹನ, ಲಘು ಮೋಟಾರು ವಾಹನ, ಮಧ್ಯಮ ಮತ್ತು ಬಾರಿ ವಾಣಿಜ್ಯ ವಾಹನಗಳು, ಟ್ರ್ಯಕ್ಟರ್, ಪ್ರಯಾಣಿಕರ ಕಾರು ಸೇರಿ ಎಲ್ಲ ಹಳೆಯ ವಾಹನಗಳಿಗೆ ಈ ನಿಯಮ ಅನ್ವಯವಾಗಲಿದೆ. ವಾಹನ ಮಾಲಿಕರು ಆನ್ಲೈನ್ ವೆಬ್ಸೈಟ್ ಗೆ ಭೇಟಿ ನೀಡಿ ನೋಂದಾಯಿಸಿ ಆನ್ ಲೈನ್ ಮೂಲಕವೇ ಹೆಚ್.ಎಸ್. ಆರ್ಪಿ ಶುಲ್ಕವನ್ನು ಪಾವತಿಸಿ ನಂತರ ವಾಹನ ಡೀಲರ್ ಬಳಿ ನಂಬರ್ ಪ್ಲೇಟ್ಗಳನ್ನು ಅಳವಡಿಸಿಕೊಳ್ಳಬೇಕು.

ಹೆಚ್.ಎಸ್.ಆರ್ಪಿ ಎಂಬುದು ವಾಹನಗಳ ನೋಂದಣಿ ನಂಬರ್ ಪ್ಲೇಟ್ ಆಗಿದ್ದು, ಅಲ್ಯೂಮಿನಿಯಂ ಲೋಹದಲ್ಲಿ ತಯಾರಿಸಲಾಗಿದ್ದು, ಇದರಲ್ಲಿ ಲೇಸರ್ ಕೋಡ್ ಇದ್ದು ಸ್ಕ್ಯಾನ್ ಮಾಡಿದಾಗ ವಾಹನದ ಸಂಪೂರ್ಣ ಮಾಹಿತಿ ಹಾಗೂ ಅಶೋಕಚಕ್ರದ ಚಿತ್ರವನ್ನು ಒಳಗೊಂಡಿದೆ. ನಕಲಿ ನಂಬರ್ ಪ್ಲೇಟ್ ಅಳವಡಿಸುವುದನ್ನು ತಪ್ಪಿಸಲು ಈ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

ಕೆ.ಎಸ್.ಆರ್ಟಿ.ಸಿ ಡಿ.ಸಿ ಶ್ರೀನಿವಾಸ್ ಮಾತಾನಾಡಿ, ದಾವಣಗೆರೆ ಘಟಕದ 56 ಕೆ.ಎಸ್.ಆರ್ಟಿ ಸಿ ಬಸ್ ಗಳಿಗೆ ಹೆಚ್.ಎಸ್.ಆರ್ಪಿ ನಂಬರ್ ಪ್ಲೇಟ್ಗಳನ್ನು ಅಳವಡಿಸಲಾಗಿದ್ದು, ಬಾಕಿಯಿರುವ 323 ಸರ್ಕಾರಿ ಸಾರಿಗೆ ಬಸ್ ಗಳಿಗೆ ಶೀಘ್ರವೇ ಹೈ–ಸೆಕ್ಯೂರಿಟಿ ನಂಬರ್ ಪ್ಲೇಟ್ಗಳನ್ನು ಅಳವಡಿಸಲು ಕ್ರಮ ವಹಿಸಲಾಗುತ್ತದೆ. ಇದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಮಾಲೀಕರಿಗೆ ಹೆಚ್ಚು ಉಪಯುಕ್ತವಾಗಲಿದೆ ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಜಯ್ಕುಮಾರ್ ಸಂತೋಷ್, ಆರ್ಟಿ.ಒ ಪ್ರಮತೇಶ ಉಪಸ್ಥಿತರಿದ್ದರು.

# ದೈಹಿಕ ಸದೃಡತೆಗೆ ಕ್ರೀಡೆ ಸಹಕಾರಿ: ಮಲಗೌಡ ಪಾಟೀಲ್

ಯಮಕನಮರಡಿ: ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಕ್ರೀಡೆಗಳು ಸಹಕಾರಿಯಾಗಿವೆ ಎಂದು ಕೆಪಿಸಿಸಿ ಸದಸ್ಯ ಮಲಗೌಡ ಪಾಟೀಲ್ ಹೇಳಿದರು.

ಅಗಸಗಿ ಗ್ರಾಮದಲ್ಲಿ ಲೋಕೋಪಯೋಗಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಯುವ ನಾಯಕ ರಾಹುಲ್ ಜಾರಕಿಹೊಳಿ ಸೂಚನೆ ಮೇರೆಗೆ ಐದು ಕಿಲೋ ಮಿಟರ್ ಓಟದ ಸ್ಪರ್ಧೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಯೂ ಜೀವನದ ಒಂದು ಭಾಗವಾಗಿದ್ದು ಸ್ಪರ್ಧಾತ್ಮಕ ಮನೋಭಾವನೆ ಮೂಡಿಸುತ್ತದೆ.

ನೀತಿ ನಿಯಮಗಳ ಸಂವಹನೆಯೊಂದಿಗೆ ಶಿಸ್ತಿನ ಅರಿವು ಉಂಟಾಗುತ್ತದೆ. ಕ್ರೀಡೆಯಲ್ಲಿ ಸೋಲು–ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಹೆಚ್ಚಿಸುತ್ತದೆ. ಹಾಗೆಯೇ ಇದರಿಂದ ಮನಸ್ಸಿನ ನಾಗಾಲೋಟದ ಕೌಶಲತೆ ವೃದ್ಧಿಸುತ್ತದೆ. ಅದನ್ನು ಜೀವನದ ಒಂದು ಭಾಗವೆಂದು




ಪರಿಗಣಿಸುವುದರಿಂದ ಒತ್ತಡದ ಜೀವನದಿಂದ ಹೊರಬರಲು ಸಾಧ್ಯ ಎಂದರು.

ಕ್ರೀಡೆಯಿಂದ ಮನುಷ್ಯನ ದೈಹಿಕ ಮತ್ತು ಮಾನಸಿಕ ವಿಕಾಸವಾಗಲಿದೆ. ಸದೃಢ ವ್ಯಕ್ತಿತ್ವ ನಿರ್ಮಾಣದಲ್ಲಿ ಕ್ರೀಡೆಯ ಪಾತ್ರ ಮಹತ್ವದ್ದಾಗಿದೆ.

ಕ್ರೀಡಾ ಕ್ಷೇತ್ರದಲ್ಲಿನ ಅಪಾರ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಲು, ಯುವಪೀಳಿಗೆ ವಿವಿಧ ಕ್ರೀಡೆಗಳಲ್ಲಿ ಸಕ್ರಿಯರಾಗಬೇಕು. ಗ್ರಾಮೀಣ ಭಾಗದ ಯುವಕರಲ್ಲಿ ವಿಶೇಷ ಪ್ರತಿಭೆ ಅಡಗಿರುತ್ತದೆ. ಆದ್ದರಿಂದ ಓಟಗಳಂತಹ ಕ್ರೀಡೆಗಳಲ್ಲಿ ಭಾಗವಹಿಸಿ ಸಾಧನೆ ಮಾಡಲು ಮೂಂದಾಗಬೇಕು ಎಂದ ಅವರು, ಮುಖ್ಯವಾಗಿ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ನೀಡುತ್ತಿದೆ. ಹೀಗಾಗಿ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ ಅವರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸ್ಥಳೀಯ ಮಟ್ಟದ ಕ್ರೀಡಾಕೂಟಗಳು ಉತ್ತಮ ವೇದಿಕೆಯಾಗಿವೆ ಎಂದರು.

ಈ ವೇಳ ಅಗಸಗಿ ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷ ಸೇರಿದಂತೆ ಸದಸ್ಯರು ಹಾಗೂ ಕಾಂಗ್ರೆಸ್ ಮುಖಂಡರು ಊರಿನ ಹಿರಿಯರು, ಯುವಕರು ಇದ್ದರು.

# ಮಹರ್ಷಿ ವಾಲ್ಮೀಕಿ ವಿಚಾರಗಳನ್ನು ಮೈಗೂಡಿಸಿಕೊಳ್ಳಿ: ಸಚಿವ ಸತೀಶ್ ಜಾರಕಿಹೊಳಿ

ಗುಂಡ್ಲುಪೇಟೆ: ವಾಲ್ಮೀಕಿ ದೇಶದ ಆದಿ ಕವಿಯಾಗಿದ್ದು, ತಾವು ಬರೆದ ರಾಮಾಯಣದಲ್ಲಿ ಯಾವ ರೀತಿ ಬದುಕಬೇಕು, ನಮ್ಮ ವಿಚಾರಗಳು ಮತ್ತು ಕಲ್ಪನೆಗಳು ಹೇಗಿರಬೇಕು ಎಂಬುದನ್ನು ತಿಳಿಸಿದ್ದಾರೆ. ಹಾಗಾಗಿ ಅವರ ವಿಚಾರಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಪಟ್ಟಣದ ಡಿ. ದೇವರಾಜ ಅರಸು ಕ್ರೀಡಾಂಗಣದಲ್ಲಿ ತಾಲ್ಲೂಕು ವಾಲ್ಮೀಕಿ ನಾಯಕ ಸಮಾಜ ಹಮ್ಮಿಕೊಂಡಿದ್ದ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಸಮಾಜ ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಮುಂದೆ ಬರಬೇಕು ಎನ್ನುವ ನಿಟ್ಟಿನಲ್ಲಿ ಹಲವರು ಸಾಕಷ್ಟು ಹೋರಾಟ ಮಾಡಿದ್ದಾರೆ.

ಕಾಂಗ್ರೆಸ್ ಸರ್ಕಾರ ಸಮುದಾಯದ ಅಭಿವೃದ್ಧಿಗೆ ವಿವಿಧ ಸೌಲಭ್ಯಗಳನ್ನು ನೀಡಿದೆ. ಶೈಕ್ಷಣಿಕ ಉದ್ದೇಶಕ್ಕೆ ವಿದೇಶಕ್ಕೆ ಹೋಗಲು ಅವಕಾಶ ಕಲ್ಪಿಸಿದೆ ಎಂದರು.

ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದೆ. ಬಡ ಮಕ್ಕಳು ಶಿಕ್ಷಣದಿಂದ ವಂಚಿತರಾಗ ಬಾರದೆಂದು ಸಾಮಾನ್ಯ, ಹಿಂದುಳಿದ ಹಾಗೂ ಎಸ್‌ಸಿ ಮತ್ತು ಎಸ್‌ಟಿ ಮಕ್ಕಳ ವಿದ್ಯಾಭ್ಯಾಸಕ್ಕೆ



ಅನುಕೂಲವಾಗಲೆಂದು ರಾಜ್ಯಾದ್ಯಂತ ವಸತಿ ಶಾಲೆಗಳನ್ನು ತೆರೆ ಯಲಾಗಿದ್ದು, ವಿದ್ಯಾವಂತ ಸಮಾಜ ನಿರ್ಮಾಣ ಮಾಡಲು ದಿಟ್ಟ ಹೆಜ್ಜೆ ಇಟ್ಟಿದೆ ಎಂದರು.

ಯುವಜನ ಸೇವೆ ಹಾಗೂ ಕ್ರೀಡಾ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಚಿವ ಬಿ. ನಾಗೇಂದ್ರ ಮಾತನಾಡಿ, ಪಟ್ಟಣದಲ್ಲಿ ಅರ್ಧಕ್ಕೆ ನಿಂತಿರುವ ವಾಲ್ಮೀಕಿ ಭವನಕ್ಕೆ 50 ಲಕ್ಷ ರೂ. ಅನುದಾನ ಮತ್ತು ಶೈಕ್ಷಣಿಕವಾಗಿ ಮುಂದೆ ಬರಬೇಕು ಎನ್ನುವ ದೇವರಾಜ ಅರಸು ಕ್ರೀಡಾಂಗಣಕ್ಕೆ 25 ಲಕ್ಷ ರೂ. ನೀಡುವುದಾಗಿ ಘೋಷಣೆ ಮಾಡಿದರು.

ಶಾಸಕ ಎಂ. ಗಣೇಶ ಪ್ರಸಾದ್‌ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಡಾ. ಅನಸೂಯ ಎಸ್. ಕೆಂಪನಹಳ್ಳಿ ಮುಖ್ಯ ಭಾಷಣ ಮಾಡಿದರು. ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು, ವಿವಿಧ ಕ್ಷೇತ್ರ ಸಾಧನೆಗೈದಪ್ರಾಧ್ಯಾಪಕ ನೀಲಕಂಠ ನಾಯಕ, ಸುಬ್ಬನಾಯಕ,ರಾಜೇಶ್ ನಾಯಕ, ಇನ್ನಿತರ ಗಣ್ಯರನ್ನು ಸನ್ಮಾನಿಸಲಾಯಿತು.

ಶಾಸಕ ಅನಿಲ್ ಚಿಕ್ಕಮಾದು, ಶಾಸಕ ದರ್ಶನ್ ಧ್ರುವನಾರಾಯಣ, ವಿಧಾನ ಪರಿಷತ್ ಸದಸ್ಯ ಅಮರನಾಥ್, ಕಾಡಾ ಮಾಜಿ ಅಧ್ಯಕ್ಷ ಎಚ್. ಎಸ್. ನಂಜಪ್ಪ, ಮಾಜಿ ಸಂಸದ ಎ. ಸಿದ್ದರಾಜು, ಚಾಮುಲ್ ನಿರ್ದೇಶಕ ನಂಜುಂಡಪ್ರಸಾದ್, ಪಿ.ಬಿ. ರಾಜ ಶೇಖರ್, ಬಿ.ಎಂ.ಮುನಿರಾಜು, ಕಬ್ಬಹಳ್ಳಿ ಮಹೇಶ್, ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ. ಬಸವರಾಜು, ಪುರಸಭಾ ಮಾಜಿ ಅಧ್ಯಕ್ಷ ವೆಂಕ ಟಾಚಾಲ, ತಹಸಿಲ್ದಾರ್ ಟಿ.ರಮೇಶ್ ಬಾಬು, ಪುರಸಭೆ ಮುಖ್ಯಾಧಿಕಾರಿ ವಸಂತ ಕುಮಾರಿ, ಪುರಸಭೆ ಸದಸ್ಯ ಎನ್.ಕುಮಾರ್, ಶ್ರೀನಿವಾಸ್ ಕಣ್ಣಪ್ಪ, ಕಾರ್ಗಳ್ಳಿಸುರೇಶ್, ಶ್ರೀನಿವಾಸನಾಯಕ, ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಪುಷ್ಪಾ ಸೈಕಲ್ ಶಾಪ್ ಶಿವು ಉಪಸ್ಥಿತರಿದ್ದರು.

# ಕರ್ನಾಟಕ ಏಕೀಕರಣಕ್ಕೆ ಕಿತ್ತೂರು ಕರ್ನಾಟಕದ ಕೊಡುಗೆ ಅವಿಸ್ಮರಣೀಯ: ಸಚಿವೆ ಹೆಬ್ಬಾಳಕರ್

ಧಾರವಾಡ: ಕರ್ನಾಟಕ ಏಕೀಕರಣಕ್ಕೆ ಕಿತ್ತೂರು ಕರ್ನಾಟಕದ ಕೊಡುಗೆ ಅವಿಸ್ಮರಣೀಯ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಧಾರವಾಡದ ನಾಡೋಜ ಡಾ. ಪಾಟೀಲ ಪುಟ್ಟಪ್ಪ ಸಭಾ ಭವನದಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘ ಇವರ ವತಿಯಿಂದ ನಡೆದ 68ನೇ ಕರ್ನಾಟಕ ರಾಜ್ಯೋತ್ಸವ " ಕರ್ನಾಟಕ ಸಂಭ್ರಮ – 50 " ರ ಸಂಭ್ರಮದಲ್ಲಿ ಪಾಲ್ಗೊಂಡು ಕಿತ್ತೂರು ಇತಿಹಾಸ ಸಂಶೋಧಕರಾದ ಲಿಂ.ದೊಡ್ಡಭಾವೆಪ್ಪ ಚನ್ನಬಸಪ್ಪ ಮೂಗಿಯವರ ಸ್ಮರಣಾರ್ಥ ದತ್ತಿ ಉದ್ಘಾಟನೆ ಮತ್ತು ' ದೊಡ್ಡಭಾವೆಪ್ಪ ಚ. ಮೂಗಿ ' ಒಂದು ಐತಿಹಾಸಿಕ ದೃಷ್ಟಿ ಎನ್ನುವ ಕೃತಿ ಬಿಡುಗಡೆಯ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಬೆಳಗಾವಿ, ಧಾರವಾಡ, ಗದಗ ಮೊದಲಾದ ಪ್ರದೇಶಗಳು ಕನ್ನಡ ನಾಡನ್ನು ಒಗ್ಗೂಡಿಸುವ ಚಳುವಳಿಯಲ್ಲಿ ಮುಂಚೂಣಿಯಲ್ಲಿದ್ದವು ಎಂದು



ಅವರು ಸ್ಮರಿಸಿದರು.

ದೊಡ್ಡ ಭಾವೆಪ್ಪ ಮೂಗಿ ಅವರು ಕಿತ್ತೂರಿನ ಇತಿಹಾಸವನ್ನು ದಾಖಲಿಸದಿದ್ದಲ್ಲಿ ನಮಗೆಲ್ಲ ಚನ್ನಮ್ಮನ ಇತಿಹಾಸ ಇಷ್ಟೊಂದು ಪರಿಪೂರ್ಣವಾಗಿ ಸಿಗುತ್ತಿರಲಿಲ್ಲ. ಯಾವ ಸೌಲಭ್ಯಗಳೂ ಇರದಿದ್ದ ಕಾಲದಲ್ಲಿ ಅವರ ಸಾಧನೆ ಮೆಚ್ಚುವಂತದ್ದು ಎಂದು ಹೆಬ್ಬಾಳಕರ್ ಹೇಳಿದರು.

ನಾವೆಲ್ಲ ಚನ್ನಮ್ಮನ ಇತಿಹಾಸದಿಂದ ಸ್ಫೂರ್ತಿ ಪಡೆದು ಬೆಳೆದವರು. ಹೆಚ್ಚು ಶಿಕ್ಷಣ ಪಡೆಯುವ ಅವಕಾಶ ಇರದಿದ್ದರೂ ನಂತರದಲ್ಲಿ ಓದಿ, ಕೇಳಿ ಒಂದಿಷ್ಟು ತಿಳಿದುಕೊಂಡಿದ್ದೇನೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಧಾರವಾಡ ಪಶ್ಚಿಮ ಶಾಸಕರಾದ ಅರವಿಂದ ಬೆಲ್ಲದ ಮಾತನಾಡಿ, ಲಕ್ಷ್ಮೀ ಹೆಬ್ಬಾಳಕರ್ ಅವರು ಹೋರಾಟದ ಮೂಲಕವೇ ಬೆಳೆದವರು. ಅವರ ಹೋರಾಟ ನಮಗೆಲ್ಲ ಕಿಚ್ಚು ಹಚ್ಚುವಂತಿದೆ. ಅವರು ಹೊಸ ಚನ್ನಮ್ಮ ಎನಿಸಿಕೊಂಡಿದ್ದಾರೆ. ಬೆಳಗಾವಿಯ ಏಕೈಕ ಗಂಡು ಮಗ ಎಂದರೆ ಲಕ್ಷ್ಮೀ ಹೆಬ್ಬಾಳಕರ್ ಎಂದರು.

ವಿರೋಧ ಪಕ್ಷದಲ್ಲಿದ್ದರೂ ಲಕ್ಷ್ಮೀ ಹೆಬ್ಬಾಳಕರ್ ಅವರಲ್ಲಿ ಇರುವ ಚನ್ನಮ್ಮನ ಗುಣಗಳಿಂದಾಗಿ ನಾವು ಅವರನ್ನು ಮೆಚ್ಚುತ್ತೇವೆ ಎಂದು ಬೆಲ್ಲದ ಹೇಳಿದರು.

ಬೈಲಹೊಂಗಲ ಮಾಜಿ ಶಾಸಕರಾದ ವಿಶ್ವನಾಥ್ ಪಾಟೀಲ, ಮಹೇಶ ಚನ್ನಂಗಿ, ಸವಿತಾ ಎಸ್ ಮೂಗಿ(ದೇಶಮುಖ್) ಚಂದ್ರಕಾಂತ ಗು ಬೆಲ್ಲದ, ಡಾ. ಎಸ್. ಆರ್. ಗುಂಜಾಳ, ಶಂಕರ ಕುಂಬಿ, ಡಾ. ಶೈಲಜಾ ಅಮರಶೆಟ್ಟಿ, ಶಂಕರ ಹಲಗತ್ತಿ, ಸಂಘದ ಪದಾಧಿಕಾರಿಗಳು, ಕಾರ್ಯಕಾರಿಣಿ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

# ರಕ್ಷಿಯಲ್ಲಿ ಸಮುದಾಯ ಭವನ ಕಾಮಗಾರಿಗೆ ಗುದ್ದಲಿ ಪೂಜೆ



ಹುಕ್ಕೇರಿ: ತಾಲೂಕಿನ ರಕ್ಷಿ ಗ್ರಾಮದಲ್ಲಿ ರಕ್ಷಮ್ಮದೇವಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಮಾಜಿ ಸಂಸದ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ಅವರು ಗುರುವಾರ ಗುದ್ದಲಿ ಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ರಮೇಶ ಕತ್ತಿ, ಶಾಸಕರ ಅನುದಾನದಲ್ಲಿ ಸುಮಾರು 17 ಲಕ್ಷ ರೂಪಾಯಿ ವೆಚ್ಚದಲ್ಲಿ ಈ ನೂತನ ಭವನ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಗುತ್ತಿಗೆದಾರರು ಮತ್ತು ಅಧಿಕಾರಿಗಳು ಗುಣಮಟ್ಟದ ಕಾಮಗಾರಿಯೊಂದಿಗೆ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು. ಧಾರ್ಮಿಕ, ಆಧ್ಯಾತ್ಮಿಕ, ಸಾಂಸ್ಕೃತಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಚಟುವಟಿಕೆಗಳಿಗೆ ಈ ಭವನ ನೆರವಾಗಬೇಕು ಎಂದರು.

ಕ್ಯಾರಗುಡ್ ಅಭಿನವ ಮಂಜುನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಗ್ರಾಮೀಣ ವಿದ್ಯುತ್ ಸಂಘದ ಅಧ್ಯಕ್ಷ ಕಲಗೌಡಾ ಪಾಟೀಲ, ನಿರ್ದೇಶಕ ರವಿ ಹಿಡಕಲ್, ಹಿರಾಶುಗರ ನಿರ್ದೇಶಕರಾದ ಬಸವರಾಜ ಮರಡಿ, ಮುಖಂಡರಾದ ಬಸವರಾಜ ಮಟಗಾರ, ಬಾಬು ಹುಕ್ಕೇರಿ, ಶಿವಾಜಿ ಕುರಬೇಟ, ಮಲ್ಲು ತೇರಣಿ, ಮಹೇಶ ಬಡಗಾಂವಿ, ಸಿದ್ದಪ್ಪ ಮಗದುಮ್ಮ, ಶಿವಾನಂದ ಮಾಳಂಗಿ, ಬಸು ಘಟಿಗನ್ನವರ, ಸುರೇಶ ತೇರಣಿ, ವಿಠ್ಠಲ ಪಾಟೀಲ, ಬಾಳಪ್ಪ ಭೀಮಣ್ಣವರ, ಸತ್ಯಪ್ಪಾ ಕುರಭೇಟ, ಬೀರಪ್ಪ ಚಂದರಗಿ, ಬಾಳಪ್ಪ ಘಸ್ತಿ, ಮಹೇಶ ಮಗದುಮ್ಮ, ಕುಶಪ್ಪಾ ಹಣಬರ ಮತ್ತಿತರರು ಉಪಸ್ಥಿತರಿದ್ದರು.

# ಡಿ.7 ರಂದು ಸಿದ್ಧರಾಮೇಶ್ವರ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಸುವರ್ಣ ಮಹೋತ್ಸವ

ಬೆಳಗಾವಿ: ನಾಗನೂರು ರುದ್ರಾಕ್ಷಿ ಮಠದ ಶ್ರೀ.ಸಿದ್ಧರಾಮೇಶ್ವರ ಪ್ರಾಥಮಿಕ ಹಾಗೂ ಪ್ರೌಢಶಾಲೆ ಸ್ಥಾಪನೆಗೊಂಡು 50 ವರ್ಷಗಳು ಸಂದಿವೆ, ಸುವರ್ಣ ಸಂಭ್ರಮದ ಈ ಸಂದರ್ಭದಲ್ಲಿ ಶ್ರೀ.ಸಿದ್ಧರಾಮೇಶ್ವರ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಸುವರ್ಣ ಮಹೋತ್ಸವವನ್ನು ಗುರುವಾರ 7 ಡಿಸೆಂಬರ್ 2023 ರಂದು ಸಾ. 6 ಗಂಟೆಗೆ ಆಚರಿಸಲಾಗುತ್ತಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಶ್ರೀ.ಕೆ.ಬಿ.ಹಿರೇಮಠ ಹೇಳಿದರು.

ಪತ್ರಿಕಾ ಪರಿಷತ್ತಿನಲ್ಲಿಂದು ಮಾತನಾಡಿದ ಅವರು "ನಾಗನೂರು ಸ್ವಾಮಿಗಳು "ಎಂದೇ ಖ್ಯಾತರಾದ ಕಾಯಕಯೋಗಿ, ಮಹಾಪ್ರಸಾದಿ ಪೂಜ್ಯಶ್ರೀ ಡಾ. ಶಿವಬಸವ ಮಹಾಸ್ವಾಮಿಗಳು 1969 ರಲ್ಲಿ ಸ್ಥಾಪಿಸಿದ ಶಿಕ್ಷಣ ಸಂಸ್ಥೆ ಇದಾಗಿದೆ. ಶ್ರೀ ಮನ್ಮಹಾರಾಜ ನಿರಂಜನ ಜಗದ್ಗುರು ಡಾ. ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿಗಳು, ಮೂರುಸಾವಿರಮಠ ಹುಬ್ಬಳ್ಳಿ ಹಾಗು ಶ್ರೀ ಮನ್ಮಹಾರಾಜ ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಗದಗ ಇವರುಗಳ ದಿವ್ಯಸಾನಿಧ್ಯದಲ್ಲಿ ಜರುಗುವ ಸುವರ್ಣ ಮಹೋತ್ಸವ ಸಮಾರಂಭವನ್ನು ನಿವೃತ್ತ ಆಯ್.ಎ.ಎಸ್. ಅಧಿಕಾರಿಗಳಾದ ಡಾ. ಎಸ್. ಎಮ್. ಜಾಮದಾರ ಅವರು ಉದ್ಘಾಟಿಸಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ನಾಗನೂರು ರುದ್ರಾಕ್ಷಿಮಠದ ಪೂಜ್ಯ ಶ್ರೀ ಅಲ್ಲಮಪ್ರಭು ಮಹಾಸ್ವಾಮಿಗಳು, ನೇತೃತ್ವವನ್ನು ಹಂದಿಗುಂದ ವಿರಕ್ತಮಠದ ಶ್ರೀ ಶಿವಾನಂದ ಸ್ವಾಮಿಗಳು, ಕಿತ್ತೂರು ಕಲ್ಮಠದ ಶ್ರೀ ಮಡಿವಾಳ ರಾಜಯೋಗೀಂದ್ರ ಮಹಾಸ್ವಾಮಿಗಳು ಹಾಗು ಪಿ ಜಿ ಹುಣಶ್ಯಾಳದ ಪೂಜ್ಯಶ್ರೀ ನಿಜಗುಣ ದೇವರು ವಹಿಸಲಿದ್ದಾರೆ ಎಂದವರು ವಿವರಿಸಿದರು.

ಶ್ರೀ ಸಿದ್ಧರಾಮೇಶ್ವರ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡಿ ವಿವಿಧ ಕ್ಷೇತ್ರಗಳಲ್ಲಿ ಅಪ್ರತಿಮ ಸಾಧನೆಗೈದ ಸಾಧಕರನ್ನು ಈ ಸಮಾರಂಭದಲ್ಲಿ ಗೌರವಿಸಲಾಗುವುದು, ಇದೇ ಸಂದರ್ಭದಲ್ಲಿ ಸ್ಮರಣ ಸಂಚಿಕೆಯೊಂದನ್ನು




ಹೊರತರಲಾಗುವುದು ಎಂದವರು ಹೇಳಿದರು.

ಶ್ರೀ ರುದ್ರಾಕ್ಷಿಮಠ ನಾಗನೂರು ಬೆಳಗಾವಿ ಇವರು 1932 ರಲ್ಲಿ, ಬೈಲಹೊಂಗಲ ತಾಲೂಕಿನ ನಾಗನೂರು ಶ್ರೀ ರುದ್ರಾಕ್ಷಿಮಠದಿಂದ ಬೆಳಗಾವಿಗೆ ಆಗಮಿಸಿ, ಗ್ರಾಮಾಂತರ ಪ್ರದೇಶದ ಬಡ ಈಗ ಪ್ರತಿಭಾವಂತ ವಿದ್ಯಾರ್ಥಿಗಳು ವಿದ್ಯೆ ಕಲಿಯಲು ಬೆಳಗಾವಿಯಲ್ಲಿ ಉಚಿತ ಪ್ರಸಾದ ನಿಲಯ ಸ್ಥಾಪಿಸಿ, ಶಿಕ್ಷಣ ಸಂಸ್ಥೆಗಳನ್ನು, ಆರಂಭಿಸಿ, ಅಕ್ಷರ ದಾಸೋಹ, ಅನ್ನದಾಸೋಹ ಕರುಣಿಸಿದ ತ್ರಿವಿಧ ದಾಸೋಹಿಗಳು, ಶ್ರೀಗಳು, ಸ್ಥಾಪಿಸಿದ ಶ್ರೀ ಸಿದ್ಧರಾಮೇಶ್ವರ ಎಜ್ಯುಕೇಶನ ಟ್ರಸ್ಟ್‌ನಲ್ಲಿ 11 ಸಮೂಹ ಸಂಸ್ಥೆಗಳಿಗೆ, ಇದರಲ್ಲಿ ಶ್ರೀ ಸಿದ್ಧರಾಮೇಶ್ವರ ಪ್ರೌಢ ಶಾಲೆ ಮತ್ತು ಪ್ರಾಥಮಿಕ ಶಾಲೆಗಳು ಆರಂಭಗೊಂಡ (1969) ಪ್ರಸ್ತುತ ವರ್ಷಕ್ಕೆ 50 ವರ್ಷಗಳು ಕಳೆದಿವೆ. ಪ್ರಸ್ತುತ 2023 ರ ಡಿಸೆಂಬರ್ 07 ರಂದು ಸುವರ್ಣ ಮಹೋತ್ಸವ ಆಚರಿಸುತ್ತಿರುವದು ಹೆಮ್ಮೆಯ ಸಂಗತಿ. ಇಲ್ಲಿ ವಿದ್ಯೆ ವಿದ್ಯಾರ್ಥಿಗಳು ಮಠಾಧೀಶರು, ವೈದ್ಯರು, ಅಧಿಕಾರಿಗಳು,ಪ್ರಾಧ್ಯಾಪಕರು, ರಾಜಕಾರಣಿಗಳು, ವಾಣಿಜ್ಯೋದ್ಯಮಿಗಳು, ಹಾಗೂ ಪ್ರಗತಿ ಪರ ರೈತರಾಗಿ ತಮ್ಮ ವಿವಿಧ ಕ್ಷೇತ್ರಗಳ ಮೂಲಕ ನಾಡಿಗೆ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಕೆ.ಬಿ.ಹಿರೇಮಠ ಹೇಳಿದರು.

ಪೂಜ್ಯಶ್ರೀ ಡಾ. ಶಿವಬಸವಗಳವರ ಉತ್ತರಾಧಿಕಾರಿಗಳಾದ ಲಿಂಗಕ್ಕೆ ಪೂಜ್ಯಶ್ರೀ ಪ್ರಭು ಮಹಾಸ್ವಾಮೀಜಿಯವರು ಶ್ರೀಗಳವರ ಇಚ್ಛಾಶಕ್ತಿಯನ್ನು ಕ್ರಿಯಾಶಕ್ತಿಯನ್ನಾಗಿಸಿ ಬಲಪಡಿಸಿದರು. ನಂತರ ಬಂದ ಪರಮಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮತ್ತು ಪರಮಪೂಜ್ಯ ಶ್ರೀ ಡಾ, ಅಲ್ಲಮಪ್ರಭು ಮಹಾಸ್ವಾಮಿಗಳವರು ಸಂಸ್ಥೆಯ ಅಂಗಸಂಸ್ಥೆಗಳ ಜೊತೆಗೆ ಈ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ವಿಸ್ತರಿಸಿ ಬೆಳೆಸಿದ್ದಾರೆ. ನೂತನ ಸುಸಜ್ಜಿತ ಕಟ್ಟಡ, ಗ್ರಂಥಾಲಯ, ಪ್ರಯೋಗಾಲಯ, ನುರಿತ ಅನುಭವಿ, ವಿಶೇಷ ಅರ್ಹತೆಯುಳ್ಳ ಶಿಕ್ಷಕ ಸಿಬ್ಬಂದಿಯನ್ನು ಹೊಂದಿರುವ ಶ್ರೀ ಸಿದ್ಧರಾಮೇಶ್ವರ ಪ್ರಾಥಮಿಕ, ಪ್ರೌಢ ಶಾಲೆಗೆ ಹಾಗೂ ಪ್ರಾಥಮಿಕ ಶಾಲೆಗಳು ಈಗ ಅತ್ಯುತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿವೆ.

ಲಕ್ಷಾಂತರ ಜನರ ಬದುಕಿಗೆ ದಾರಿದೀಪವಾದ ಈ ಶಾಲೆಯ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಪೂಜ್ಯ ಶ್ರೀಗಳು ಪ್ರಸಾದ ನಿಲಯದ ಹಳೆಯ ವಿದ್ಯಾರ್ಥಿಗಳ ಸಂಘ ಹಾಗೂ ವಿವಿಧ ದಾನಿಗಳು ನಗದು ರೂಪದ ಶಿಷ್ಯವೇತನ ನೀಡಿ ಮಾರ್ಗದರ್ಶನ ಮಾಡುತ್ತಲಿದ್ದಾರೆ. ಭವಿಷ್ಯತ್ತಿನ ನೇತಾರರನ್ನು ರೂಪಿಸುವ ಈ ಶಾಲೆಯ ಸುವರ್ಣ, ಮಹೋತ್ಸವ ಡಿಸೆಂಬರ 07 ರಂದು ನಡೆಯವ ಸಮಾರಂಭಕ್ಕೆ ನಾಡಿನ ಹೆಸರಾಂತ ಮಠಾಧೀಶರು, ಜಗದ್ಗುರುಗಳು, ಜ್ಞಾನಿಗಳು, ಶಿಕ್ಷಣ ತಜ್ಞರು, ಶ್ರೇಷ್ಠ ಸಾಹಿತಿಗಳು ಹಾಗೂ ಆಗಮಿಸಲಿದ್ದಾರೆ ಎಂದವರು ಸಂಸ್ಥೆಯ ಕುರಿತು ವಿವರಗಳನ್ನು ನೀಡಿದರು.

ಸಂಪುಟ: 4 ಸಂಚಿಕೆ: 241 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089